ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 86 Issue: | ರಾಯಚೂರು Raichur | 18-09-2026 | ಶುಕ್ರವಾರ Friday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

**India Vs Afghanistan : ರೋಹಿತ್ ಶರ್ಮಾ ದಾಖಲೆ ಮುರಿದ ಅಭಿಷೇಕ್ ಶರ್ಮಾ; T-20 ಕ್ರಿಕೆಟ್‌ನಲ್ಲಿ ಹೊಸ ಇತಿಹಾಸ!**




# ಕಲ್ಯಾಣ ಕರ್ನಾಟಕವನ್ನು ರಾಜ್ಯದ ಮಾದರಿ ಪ್ರದೇಶವನ್ನಾಗಿ ಮಾಡಲು ನಮ್ಮ ಸರ್ಕಾರ ಬದ್ಧ: ಡಾ.ಅಜಯ್ ಧರ್ಮಸಿಂಗ್



ರಾಯಚೂರು ಸೆ. 17 (ಕರ್ನಾಟಕ ವಾರ್ತೆ): ಸರ್ಕಾರವು ಸಾಮಾಜಿಕ ನ್ಯಾಯ, ರೈತರ ಹಿತರಕ್ಷಣೆ ಮತ್ತು ಮೂಲಭೂತ ಸೌಕರ್ಯಗಳಿಗೆ ಆದ್ಯತೆ ನೀಡುವ ಮೂಲಕ ಕಲ್ಯಾಣ ಕರ್ನಾಟಕವನ್ನು ರಾಜ್ಯದ ಮಾದರಿ ಪ್ರದೇಶವನ್ನಾಗಿ ಮಾಡಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಹೇಳಿದರು.

ಸೆಪ್ಟಂಬರ್ 17ರ ಗುರುವಾರ ದಂದು ರಾಯಚೂರು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದ ವತಯಿಂದ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ರಾಷ್ಟ ಧ್ವಜಾರೋಹಣ ನೆರವೇರಿಸಿ, ಮಾತನಾಡಿದರು.

ಕಳೆದ 13 ವರ್ಷಗಳಲ್ಲಿ ಈ ಭಾಗದ ಅಭಿವೃದ್ಧಿಗೆ 30 ಸಾವಿರ ಕೋಟಿ ರೂ. ಅಧಿಕ ಅನುದಾನ ಹರಿದುಬಂದಿದೆ. ಪ್ರಸಕ್ತ ಸರ್ಕಾರವು ಕಳೆದ 40 ತಿಂಗಳುಗಳಲ್ಲಿ 1,45,000 ಕೋಟಿಗೂ ಹೆಚ್ಚು ಹಣವನ್ನು ಗ್ಯಾರಂಟಿ ಯೋಜನೆಗಳು ಸೇರಿದಂತೆ ಮೂಲಭೂತ ಸೌಕರ್ಯ ಹಾಗೂ ಜನರ ಕಲ್ಯಾಣಕ್ಕಾಗಿ ನೀಡಿದೆ. ಇದಲ್ಲದೆ ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳು, 41 ವಿಧಾನಸಭಾ ಕ್ಷೇತ್ರಗಳು, 50 ತಾಲೂಕುಗಳು ಹಾಗೂ ಸುಮಾರು 1.12 ಕೋಟಿ ಜನರ ಅಭಿವೃದ್ಧಿಗಾಗಿ 18,000 ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗಕ್ಕೆ ಅಂಟಿದ್ದ ಹಿಂದುಳಿದ ಪ್ರದೇಶ ಎಂಬ ಹಣೆಪಟ್ಟಿಯನ್ನು ಒರೆಸಿಹಾಕಲು ಸರ್ಕಾರವು ನಿರಂತರ ಶ್ರಮಿಸುತ್ತಿದೆ. 1980ರಲ್ಲಿ ಮಾಜಿ ಮುಖ್ಯಮಂತ್ರಿ ದಿವಂಗತ ಗುಂಡೂರಾವ್ ಅವರ ಅವಧಿಯಲ್ಲಿ ದಿವಂಗತ ಎನ್. ಧರಂಸಿಗ್ ಅವರ ನೇತೃತ್ವದ ಈ ಭಾಗದ ಅಭಿವೃದ್ಧಿಗೆ ಸಮಿತಿಯನ್ನು ರಚಿಸಲಾಯಿತು. ಧರಂಸಿಗ್ ಅವರು ಆಗ ವಸತಿ ಸಚಿವರಾಗಿದ್ದಾಗ ಈ ಭಾಗದಲ್ಲಿ ಪ್ರವಾಸ ಕೈಗೊಂಡು 'ಎಚ್‌ಕೆಡಿಬಿ' (ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ) ಸ್ಥಾಪನೆಗೆ ಶಿಫಾರಾಸು ಮಾಡಿದರು. ಮಾಜಿ ಮುಖ್ಯಮಂತ್ರಿ ಎಸ್. ಎಂ. ಕೃಷ್ಣ ಅವರ ಅವಧಿಯಲ್ಲಿ ಎಚ್‌ಕೆಡಿಬಿ ಸ್ಥಾಪನೆ ಆಯಿತು. ಮಾಜಿ ಸಚಿವ ಎನ್. ಎಸ್. ಬೋಸರಾಜು ಅವರು ಇದರ ಪ್ರಥಮ ಅಧ್ಯಕ್ಷರಾಗಿ ಮಂಡಳಿಯ ಚಟುವಟಿಕೆಗಳನ್ನು ಬಲಪಡಿಸಿದರು ಎಂದರು.

1999ರಲ್ಲಿ ಎಸ್.ಎಂ.ಕೃಷ್ಣ, ಮಲ್ಲಿಕಾರ್ಜುನ ಖರ್ಗೆ, ಎನ್. ಧರಂಸಿಗ್ ಹಾಗೂ ಇತರೆ ಜನಪ್ರತಿನಿಧಿಗಳ ಒಗ್ಗಟ್ಟಿನ ಶ್ರಮದಿಂದ ಕೇಂದ್ರ ಸರ್ಕಾರಕ್ಕೆ ವಿಶೇಷ ಸ್ಥಾನಮಾನಕ್ಕಾಗಿ ಆರ್ಟಿಕಲ್ 371 (ಜೆ) ಶಿಫಾರಸು ಕಳುಹಿಸಲಾಯಿತು.

2009ರಲ್ಲಿ ರಾಹುಲ್ ಗಾಂಧಿ ಅವರ ಭರವಸೆಯಂತೆ, ಕೇಂದ್ರ ಸಚಿವರಾಗಿದ್ದ ಮಲ್ಲಿಕಾರ್ಜುನ ಖರ್ಗೆ, ಸಂಸದರಾಗಿದ್ದ ಧರಂಸಿಗ್ ಹಾಗೂ ಹಿರಿಯ ನಾಯಕರ ಯತ್ನದಿಂದ ಸಂಸತ್ತಿನಲ್ಲಿ ಮೂರನೇ ಎರಡರಷ್ಟು ಬಹುಮತದೊಂದಿಗೆ ಆರ್ಟಿಕಲ್ 371 (ಜೆ) ತಿದ್ದುಪಡಿ ಕಾಯ್ದೆ ಅಂಗೀಕಾರವಾಯಿತು. 2012ರ ಡಿಸೆಂಬರ್ 28ರಂದು ಯುಪಿಎ ಸರ್ಕಾರದಿಂದ ಅನುಮೋದನೆಗೊಂಡು, 2013ರ ನವೆಂಬರ್ 6ರಂದು ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅವಧಿಯಲ್ಲಿ ಅನುಷ್ಠಾನಕ್ಕೆ ಬಂದಿತು ಎಂದರು.

ಅಕ್ಷರ ಆವಿಷ್ಕಾರ ಯೋಜನೆ: ಶಿಕ್ಷಣವೇ ಅತ್ಯಂತ ಶಕ್ತಿಶಾಲಿ ಅಸ್ತ್ರ ಎಂಬ ತತ್ವದಡಿ, 2023ನೇ ವರ್ಷವನ್ನು ಶೈಕ್ಷಣಿಕ ವರ್ಷವೆಂದು ಘೋಷಿಸಲಾಗಿದೆ. ಈ ಯೋಜನೆಯಡಿ 2023ರಿಂದ 2026ರವರೆಗೆ ರಾಯಚೂರು ಜಿಲ್ಲೆಯೊಂದಕ್ಕೆ 201 ಕೋಟಿಗೂ ಹೆಚ್ಚು ಅನುದಾನ ನೀಡಲಾಗಿದೆ. ಇಸಿಸಿಇ, ದ್ವಿಭಾಷಾ ತರಗತಿಗಳು, ಎಲ್‌ಕೆಜಿ/ಯುಕೆಜಿ ತರಗತಿಗಳನ್ನು ಆರಂಭಿಸಲಾಗಿದೆ ಎಂದರು.

ಕೆಪಿಎಸ್ (ಕರ್ನಾಟಕ ಪಬ್ಲಿಕ್ ಶಾಲೆ) ಸ್ಥಾಪನೆ: ಮಹಾನಗರಗಳ ಮಾದರಿಯಲ್ಲಿ ಎಲ್‌ಕೆಜಿಯಿಂದ 12ನೇ ತರಗತಿವರೆಗೆ ಗುಣಮಟ್ಟದ ಶಿಕ್ಷಣ ನೀಡಲು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿದ 200 ಶಾಲೆಗಳು ಹಾಗೂ ಪ್ರಾಥಮಿಕ ಶಿಕ್ಷಣ ಇಲಾಖೆಯಿಂದ 100 ಶಾಲೆಗಳು ಸೇರಿದಂತೆ ಒಟ್ಟು 300 ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಪ್ರತಿ ಶಾಲೆಗೆ 3 ಕೋಟಿಯಿಂದ 10 ಕೋಟಿವರೆಗೂ ವೆಚ್ಚ ಮಾಡಲಾಗುತ್ತಿದೆ ಎಂದರು.

ಆರೋಗ್ಯ ಹಾಗೂ ಉದ್ಯೋಗ ಆವಿಷ್ಕಾರ: ಆರೋಗ್ಯ ಆವಿಷ್ಕಾರ ಯೋಜನೆಗೆ 207 ಕೋಟಿ, ಉದ್ಯೋಗ ಆವಿಷ್ಕಾರಕ್ಕೆ 10 ಕೋಟಿ ಹಾಗೂ ಅರಣ್ಯ ಆವಿಷ್ಕಾರ ಯೋಜನೆಗೆ 100 ಕೋಟಿ ಅನುಸಂಧಾನ ಮಾಡಲಾಗಿದೆ.

ಅಲ್ಲದೆ ಹಿಂದುಳಿದ ವರ್ಗಗಳು, 2ನೇ ಪುಟಕ್ಕೆ

## ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಶಾಸಕ ಬಸನಗೌಡ ದದ್ದಲ್ ಭಾಗಿ



ಕಲಬುರಗಿ, ಸೆ.17: ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅವರು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಗಣ್ಯರೊಂದಿಗೆ ಭಾಗವಹಿಸಿದರು.

ಕಲ್ಯಾಣ ಕರ್ನಾಟಕದ ವಿಮೋಚನಾ ಹೋರಾಟ, ತ್ಯಾಗ ಹಾಗೂ ಸ್ವಾಭಿಮಾನದ ಇತಿಹಾಸವನ್ನು ಸ್ಮರಿಸುವ ಉತ್ಸವದ ಅಂಗವಾಗಿ ರಾಷ್ಟ್ರಧ್ವಜಾರೋಹಣ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆದವು.

ಈ ಸಂದರ್ಭದಲ್ಲಿ ಶಾಸಕ ಬಸನಗೌಡ ದದ್ದಲ್ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗವು ಐತಿಹಾಸಿಕ ಹಿನ್ನೆಲೆ ಹಾಗೂ ಹೋರಾಟದ ಪರಂಪರೆಯನ್ನು ಹೊಂದಿದ್ದು, ಈ ಭಾಗದ ಜನರ ಆಶೋತ್ತರಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದರು.

ಶಿಕ್ಷಣ, ಆರೋಗ್ಯ, ನೀರಾವರಿ, ಉದ್ಯೋಗ ಹಾಗೂ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಇನ್ನಷ್ಟು 2ನೇ ಪುಟಕ್ಕೆ

## ರೈತರ ಬಾಕಿ ₹109 ಕೋಟಿ ಶೀಘ್ರ ಪಾವತಿಗೆ ಕ್ರಮ: ಸಚಿವ ಡಾ. ಅಜಯ್ ಧರ್ಮಸಿಂಗ್



ರಾಯಚೂರು: ಜಿಲ್ಲೆಯ ರೈತರಿಂದ ಜೋಳ ಖರೀದಿಸಿದ ಮೊತ್ತದಲ್ಲಿ ಈಗಾಗಲೇ ಸುಮಾರು ₹350 ಕೋಟಿ ಪಾವತಿಸಲಾಗಿದ್ದು, ಮೇ 31ರಿಂದ ಖರೀದಿಸಿರುವ ಜೋಳಕ್ಕೆ ಸಂಬಂಧಿಸಿದಂತೆ ಇನ್ನೂ ₹109 ಕೋಟಿ ರೈತರಿಗೆ ನೀಡಬೇಕಾಗಿದೆ. ಬಾಕಿ ಹಣವನ್ನು ಆದಷ್ಟು ಶೀಘ್ರ ರೈತರ ಖಾತೆಗೆ ಜಮಾ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ತಿಳಿಸಿದರು.

ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖರೀದಿಸಿದ ಆಹಾರ ಧಾನ್ಯಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಸುಮಾರು ₹1,000 ಕೋಟಿ ಬರಬೇಕಿದೆ. ಈ ಮೊತ್ತ ಬಿಡುಗಡೆಯಾಗದಿರುವುದರಿಂದ ಜಿಲ್ಲೆಯ ರೈತರಿಗೆ ಪಾವತಿಸಬೇಕಾದ ₹109 ಕೋಟಿ ಬಾಕಿ ಉಳಿದಿದೆ ಎಂದು ಹೇಳಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿರುವ ಸಂದರ್ಭದಲ್ಲಿ ರೈತರಿಗೆ ಆರ್ಥಿಕ ನೆರವು ಅತ್ಯಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯ 2ನೇ ಪುಟಕ್ಕೆ

## ಶ್ರೀಮಠಕ್ಕೆ ಅಪೋಲೋ ಆಸ್ಪತ್ರೆಗಳ ಉಪಾಧ್ಯಕ್ಷೆ ಉಪಾಸನಾ ಕೊನಿಡಲಾ ಭೇಟಿ



ಮಂತ್ರಾಲಯ: ಅಪೋಲೋ ಆಸ್ಪತ್ರೆಗಳ ಸಿಎಸ್ ಆರ್ ವಿಭಾಗದ ಉಪಾಧ್ಯಕ್ಷೆ ಶ್ರೀಮತಿ ಉಪಾಸನಾ ಕೊನಿಡಲಾ ಅವರು ಇಂದು ಸುಕ್ಷೇತ್ರ ಮಂತ್ರಾಲಯದ ಶ್ರೀಮಠಕ್ಕೆ ಭೇಟಿ ನೀಡಿ, ಶ್ರೀ ರಾಘವೇಂದ್ರ ಸ್ವಾಮಿಗಳ ದಿವ್ಯ ದರ್ಶನ ಪಡೆದರು.

ಶ್ರೀಮಠಕ್ಕೆ ಆಗಮಿಸಿದ ಅವರನ್ನು ಆತ್ಮೀಯವಾಗಿ ಸ್ವಾಗತಿಸಲಾಯಿತು. ಶ್ರೀ ರಾಘವೇಂದ್ರ ಸ್ವಾಮಿಗಳ ಮೂಲ ಬೃಂದಾವನದ ದರ್ಶನ ಪಡೆದು ವಿಶೇಷ ಪ್ರಾರ್ಥನೆ ಸಲ್ಲಿಸಿದ ಬಳಿಕ, ಶ್ರೀಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಯವರ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಯವರು ಉಪಾಸನಾ ಕೊನಿಡಲಾ ಅವರಿಗೆ ಫಲಮಂತ್ರಾಕ್ಷತೆ ನೀಡಿ, ಸ್ಮರಣಿಕೆ ಪ್ರದಾನ ಮಾಡಿ ಆಶೀರ್ವದಿಸಿದರು.

ಭೇಟಿಯ ವೇಳೆ ಮಂತ್ರಾಲಯ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಕ್ತರು ಹಾಗೂ ಅಗತ್ಯವಿರುವ ಜನರಿಗೆ ಇನ್ನಷ್ಟು ಉತ್ತಮ ಆರೋಗ್ಯ ಸೇವೆಗಳು ದೊರೆಯುವಂತೆ ವೈದ್ಯಕೀಯ ಸೌಲಭ್ಯಗಳನ್ನು ವಿಸ್ತರಿಸುವ ಅಗತ್ಯದ ಕುರಿತು ಶ್ರೀ ಸುಬುಧೇಂದ್ರ ತೀರ್ಥರು ಚರ್ಚಿಸಿದರು. ಸುಕ್ಷೇತ್ರಕ್ಕೆ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ತುರ್ತು ಚಿಕಿತ್ಸೆ, ಮೂಲ ಆರೋಗ್ಯ ಸೇವೆಗಳು ಹಾಗೂ ಸುಸಜ್ಜಿತ ವೈದ್ಯಕೀಯ ಸೌಲಭ್ಯಗಳ ಅಗತ್ಯತೆ ಕುರಿತು ಅವರು ಅಭಿಪ್ರಾಯ ಹಂಚಿಕೊಂಡರು.

ಮಂತ್ರಾಲಯವು ಕೇವಲ ಧಾರ್ಮಿಕ ಕ್ಷೇತ್ರವಷ್ಟೇ ಅಲ್ಲದೆ, ವಿವಿಧ ರಾಜ್ಯಗಳಿಂದ ಆಗಮಿಸುವ ಭಕ್ತರ ಪ್ರಮುಖ ಯಾತ್ರಾಸ್ಥಳವಾಗಿರುವುದರಿಂದ ಆರೋಗ್ಯ ಸೇವೆಗಳನ್ನು ಇನ್ನಷ್ಟು 2ನೇ ಪುಟಕ್ಕೆ

## ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಒಗ್ಗಟ್ಟಿನ ಪ್ರಯತ್ನ ಅಗತ್ಯ: ಎನ್.ಎಸ್. ಬೋಸರಾಜು



ರಾಯಚೂರು: ತ್ಯಾಗ, ಬಲಿದಾನ ಹಾಗೂ ದೀರ್ಘ ಹೋರಾಟದ ಫಲವಾಗಿ ಕಲ್ಯಾಣ ಕರ್ನಾಟಕ ಭಾಗಕ್ಕೆ ವಿಶೇಷ ಸ್ಥಾನಮಾನ ದೊರೆತಿದ್ದು, ಈ ಭಾಗದ ಇತಿಹಾಸವನ್ನು ಪ್ರತಿಯೊಬ್ಬರೂ ಸ್ಮರಿಸಬೇಕು. ಕಲ್ಯಾಣ ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು.

ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ತಮ್ಮ ಕಾರ್ಯಾಲಯದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಈ ಭಾಗದ ವಿಮೋಚನಾ ಹೋರಾಟ, ಜನರ ತ್ಯಾಗ ಹಾಗೂ ಅಭಿವೃದ್ಧಿಗಾಗಿ ನಡೆದ ಪ್ರಯತ್ನಗಳನ್ನು ನೆನಪಿಸಿಕೊಂಡರು.

ಶಿಕ್ಷಣ, ಉದ್ಯೋಗ, ನೀರಾವರಿ, ಆರೋಗ್ಯ, ಮೂಲಸೌಕರ್ಯ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ಕಲ್ಯಾಣ ಕರ್ನಾಟಕ ಭಾಗ ಇನ್ನಷ್ಟು ಪ್ರಗತಿ ಸಾಧಿಸಬೇಕಾಗಿದೆ. ವಿಶೇಷ ಸ್ಥಾನಮಾನದಿಂದ ದೊರೆಯುವ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ಪ್ರದೇಶದ ಅಭಿವೃದ್ಧಿಗೆ ವೇಗ ನೀಡಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಹೈದರಾಬಾದ್ ನಿಜಾಮರ ಆಳ್ವಿಕೆಗೆ ಒಳಪಟ್ಟಿದ್ದ ಈ ಭಾಗವು ದೇಶ ಸ್ವಾತಂತ್ರ್ಯ ಪಡೆದ 2ನೇ ಪುಟಕ್ಕೆ

## ದಾಖಲೆ ಡಿಜಿಟಲೀಕರಣ ಕೊಠಡಿಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ



ರಾಯಚೂರು ಸೆ. 17 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಯ ಹಳೆ ಕಟ್ಟಡದಲ್ಲಿ ಪಾಲಿಕೆ ದಾಖಲೆ ಡಿಜಿಟಲೀಕರಣ ಕೊಠಡಿಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಸೆಪ್ಟಂಬರ್ 17ರ ಗುರುವಾರ ದಂದು ಚಾಲನೆ ನೀಡಿದರು.

ಡಿಜಿಟಲೀಕರಣ ಕೊಠಡಿಯು 2 ಕೋಟಿ ರೂ. ವೆಚ್ಚ ಮಾಡಲಾಗಿದ್ದು, ದಾಖಲೆ ಆಧುನೀಕರಿಸಿ, ದಾಖಲೆಗಳ ಸುರಕ್ಷಿತ ಸಂರಕ್ಷಣೆ ಮತ್ತು ಸುಲಭ ನಿರ್ವಹಣೆಗೆ ವ್ಯವಸ್ಥೆ ಕಲ್ಪಿಸಲಾಗಿದೆ. ಸುಮಾರು 1.5 ಲಕ್ಷ ಕಡತಗಳಲ್ಲಿರುವ 10 ಲಕ್ಷ ಪುಟಗಳನ್ನು ಡಿಜಿಟಲೀಕರಿಸುವುದು. ಇದರಲ್ಲಿ ಎ, ಬಿ, ಸಿ, ಮತ್ತು ಡಿವರ್ಗಗಳ ದಾಖಲೆಗಳನ್ನು ಒಳಗೊಂಡತೆ ಸುರಕ್ಷಿತ ಡಿಜಿಟಲ್ ಸಂಗ್ರಹಣೆ ಹಾಗೂ ತ್ವರಿತ ಮರುಪಡೆಯುವ ವ್ಯವಸ್ಥೆ ಕಲ್ಪಿಸಲಾಗಿದೆ.

ಸರಳ ಡಿಜಿಟಲ್ ವೇದಿಕೆಯ ಮೂಲಕ ನಾಗರಿಕರಿಗೆ ಅಗತ್ಯ ಮಾಹಿತಿಯನ್ನು ತ್ವರಿತವಾಗಿ ಪಡೆಯುವ ಅವಕಾಶ ಕಲ್ಪಿಸುವುದು. ಮಾಹಿತಿ ಹಕ್ಕು ಅರ್ಜಿಗಳು ಹಾಗೂ ಸಾರ್ವಜನಿಕ ದೂರುಗಳ ಸಲ್ಲಿಕೆ, ಸ್ಥಿತಿ ಪರಿಶೀಲನೆ ಮತ್ತು ಪರಿಣಾಮಕಾರಿಯಾಗಿ ನಿರ್ವಹಿಸುವ ವ್ಯವಸ್ಥೆ. ವಿಲೇವಾರಿಯನ್ನು ಮತ್ತಷ್ಟು 2ನೇ ಪುಟಕ್ಕೆ

## ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಸಚಿವರಿಂದ ಪ್ರಶಸ್ತಿ ಪತ್ರ ವಿತರಣೆ



ರಾಯಚೂರು ಸೆ. 17 (ಕರ್ನಾಟಕ ವಾರ್ತೆ): ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ನಮ್ಮ ಭೂಮಿ-ನಮ್ಮ ನೀರು-ನಮ್ಮ ಶಕ್ತಿ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ನಗದು ಬಹುಮಾನದ ಜೊತೆಗೆ ಪ್ರಶಸ್ತಿ ಪತ್ರವನ್ನು ವಿತರಿಸಲಾಯಿತು.

ಈ ವರ್ಷ 2026 ಎಲ್ ನೀನೋ ವರ್ಷವಾಗಿರುವುರಿಂದ ವಾಡಿಕೆ ಮಳೆ ಕಡಿಮೆಯಾಗಬಹುದಾದ ಸಂಭವವಿದ್ದು, ಕೃಷಿ, ಕುಡಿಯುವ ನೀರಿನ ಕೊರತೆಯಾಗುವ ಸಾಧ್ಯತೆ ಇರುತ್ತದೆ. ಆದುದರಿಂದ ಸಾರ್ವಜನಿಕರು, ರೈತರು ಹಾಗೂ ವಿದ್ಯಾರ್ಥಿಗಳಿಗೆ ನೀರಿನ ಮಿತಬಳಕೆ ಮತ್ತು ಸಂರಕ್ಷಣೆ ಕುರಿತು ಅರಿವು ಮೂಡಿಸಬೇಕಾಗಿದೆ. ಆದುದರಿಂದ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ನೀರಿದ್ದರೆ ನಾಳೆ ಕಾರ್ಯಕ್ರಮದಡಿಯಲ್ಲಿ ಅಂತರ್ಜಲ ಬಳಕೆ ನಿರ್ವಹಣೆ ಕುರಿತು ನಮ್ಮ ಭೂಮಿ-ನಮ್ಮ ನೀರು-ನಮ್ಮ ಶಕ್ತಿ ಎಂಬ ವಿಷಯದ ಕುರಿತಾಗಿ ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಚಿತ್ರಕಲಾ ಸ್ಪರ್ಧೆಯನ್ನು ಸೆಪ್ಟಂಬರ್ 11ರಂದು ರಾಯಚೂರು ನಗರದ ಸ್ಟೇಷನ್ ರಸ್ತೆಯಲ್ಲಿರುವ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿ ಪೂರ್ಣ ಗೊಳಿಸಲಾಯಿತು. 2ನೇ ಪುಟಕ್ಕೆ

## ವಿಶ್ವಕರ್ಮರ ಆದರ್ಶವನ್ನು ಅಳವಡಿಸಿಕೊಳ್ಳಿ: ಡಾ.ವಿಶ್ವನಾಥ ಎಸ್.ಪತ್ತಾರ




ರಾಯಚೂರು ಸೆ. 17 (ಕರ್ನಾಟಕ ವಾರ್ತೆ): ವಿಶ್ವಕರ್ಮರ ಆದರ್ಶವನ್ನು ಅಳವಡಿಸಿಕೊಂಡು, ಮಾನವೀಯ ಮೌಲ್ಯಗಳೊಂದಿಗೆ ಬದುಕಿದರೆ ಮಾತ್ರ ಜಯಂತಿಗಳ ಆಚರಣೆಗೆ ಅರ್ಥ ಬರುತ್ತದೆ ಎಂದು ಉಪನ್ಯಾಸಕರಾದ ಡಾ. ವಿಶ್ವನಾಥ ಎಸ್. ಪತ್ತಾರ ಗುಡಿಹಾಳ ಅವರು ಹೇಳಿದರು.

ಸೆಪ್ಟಂಬರ್ 17ರ ಗುರುವಾರ ದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಅವರು ಮಾತನಾಡಿದರು.

ಬುದ್ಧಿವಂತಿಕೆ, ದೂರದೃಷ್ಟಿ ಹಾಗೂ ಕೌಶಲಗಳನ್ನು ಹೊಂದಿರುವ ವಿಶ್ವಕರ್ಮ ಸಮಾಜದವರು ಹುಟ್ಟು ತಂತ್ರಜ್ಞರಾಗಿದ್ದಾರೆ. ನಿರಂತರ ಸಾಮಾಜಿಕ ಸೇವೆಯಲ್ಲಿ ನಿರತರಾದ ಈ ಸಮುದಾಯದವರು ಶೈಕ್ಷಣಿಕ, ಆರ್ಥಿಕ, ರಾಜಕೀಯ ಸೇರಿದಂತೆ ಎಲ್ಲ ರಂಗದಲ್ಲಿಯೂ ಸಬಲರಾಗಬೇಕು ಎಂದರು.

ವಿಶ್ವಕರ್ಮ ಎನ್ನುವುದು ಕೇವಲ ಒಂದು ಸಮುದಾಯವಲ್ಲ, ಅದೊಂದು ಸೃಷ್ಟಿಶೀಲ ಸಂಸ್ಕೃತಿ ಮತ್ತು ಜ್ಞಾನ ಪರಂಪರೆ. ಸದ್ಯೋಜಾತ, ವಾಮದೇವ, ಅಘೋರ, ತತ್ಪುರುಷ ಹಾಗೂ ಈಶಾನ ಎಂಬ ಪಂಚಮುಖಗಳಿದ ಉದ್ಭವಿಸಿದ ಸೃಷ್ಟಿಯ ಮೂಲಶಕ್ತಿ ವಿಶ್ವಕರ್ಮ. ಈ ಜಯಂತಿಯು ಕ್ಯಾಲೆಂಡರ್ ದಿನಾಂಕ ಆಧಾರಿತವಲ್ಲ, ಪಂಚಾಗದ ಕನ್ಯಾ ಸಂಕ್ರಮಣದ ನಿಮಿತ್ತ ನಡೆಯುವ ಖಗೋಳಾಧಾರಿತ ಆಚರಣೆಯಾಗಿದೆ ಎಂದರು.

ಈ ವೇಳೆ ಪತ್ರಕರ್ತ ಮಾರುತಿ ಬಡಿಗೇರ ಅವರು ಮಾತನಾಡಿ, ಸಮಾಜದ ಕುರಿತು ಹಿತಾನುಡಿಗಳನ್ನಾಡಿ, ಕಲ್ಲಿಗೆ ಮಾತು ಕಲಿಸಿ, ಸಂಗೀತ ನುಡಿಸಿದ ಶಿಲ್ಪಿಗಳ ಪರಂಪರೆ ನಮ್ಮದು. ಬೇಲೂರು, ಹಳೆಬೀಡಿನಂತಹ ಕಲೆಯ ಬಲೆಗಳನ್ನು ಸೃಷ್ಟಿಸಿದ ಇತಿಹಾಸದ ಮೂಲಾಧಾರಗಳನ್ನು ನಾವು ರಕ್ಷಿಸಿಕೊಳ್ಳಬೇಕಾಗಿದೆ. ಜಯಂತಿಗಳನ್ನು ಕೇವಲ ಸಾಂಕೇತಿಕವಾಗಿ ಆಚರಿಸದೆ ನಮ್ಮ ಹಕ್ಕುಗಳಿಗಾಗಿ 2ನೇ ಪುಟಕ್ಕೆ

## ಚಿಕ್ಕಹೊನ್ನಕುಣಿ ಕೆಬಿಜೆಎನ್‌ಎಲ್ ಕಚೇರಿ ಸ್ಥಳಾಂತರ ವಿರೋಧಿಸಿ ಸೆ.28ರಂದು ಬೃಹತ್ ಧರಣಿ: ಶಾಸಕಿ ಕರೆಮ್ಮ ಜಿ. ನಾಯಕ



ದೇವದುರ್ಗ, ಸೆ.17: ತಾಲೂಕಿನ ಚಿಕ್ಕಹೊನ್ನಕುಣಿಯಲ್ಲಿರುವ ಕೆಬಿಜೆಎನ್ ಎಲ್ ವಿಭಾಗ ಸಂಖ್ಯೆ6 ಹಾಗೂ ಎರಡು ಉಪವಿಭಾಗಗಳ ಕಚೇರಿಗಳನ್ನು ಬೇರೆಡೆಗೆ ಸ್ಥಳಾಂತರಿಸಬಾರದು ಎಂದು ಒತ್ತಾಯಿಸಿ ಸೆ.28ರಂದು ಚಿಕ್ಕಹೊನ್ನಕುಣಿಯಲ್ಲಿ ಬೃಹತ್ ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಶಾಸಕಿ ಕರೆಮ್ಮ ಜಿ. ನಾಯಕ ತಿಳಿಸಿದರು.

ಪಟ್ಟಣದ ತಮ್ಮ ನಿವಾಸದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾರಾಯಣಪುರ ಬಲದಂಡೆ ಕಾಲುವೆ ವ್ಯಾಪ್ತಿಯಲ್ಲಿ 9ರಿಂದ 18ನೇ ವಿತರಣಾ ಕಾಲುವೆಗಳ ಮೂಲಕ ವ್ಯಾಪಕ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ. ಈ ಪ್ರದೇಶದಲ್ಲಿ ಟೇಲೆಂಡ್ ಸಮಸ್ಯೆಯ ಜೊತೆಗೆ ಹಲವು ಕಾಲುವೆಗಳ ದುರಸ್ತಿ ಕಾಮಗಾರಿಗಳು ಇನ್ನೂ ಬಾಕಿ ಇವೆ ಎಂದು ಹೇಳಿದರು.

15 ಮತ್ತು 16ನೇ ವಿತರಣಾ ಕಾಲುವೆಗಳ ಮೂಲಕ ಸುಮಾರು 22 ಸಾವಿರಕ್ಕೂ ಹೆಚ್ಚು ಹೆಕ್ಟೇರ್ ಪ್ರದೇಶ ನೀರಾವರಿಗೆ ಒಳಪಟ್ಟಿದೆ. ಲಿಂಗಸುಗೂರು ಮತ್ತು ರಾಯಚೂರು ತಾಲೂಕುಗಳಿಗೆ ಹೋಲಿಸಿದರೆ ದೇವದುರ್ಗ ಭಾಗದಲ್ಲಿಯೂ ಹೆಚ್ಚಿನ ನೀರಾವರಿ ವ್ಯಾಪ್ತಿ ಇರುವುದರಿಂದ ರೈತರ ಅನುಕೂಲಕ್ಕಾಗಿ ಅಮರಾಪುರ ಹಾಗೂ ಚಿಕ್ಕಹೊನ್ನಕುಣಿಯಲ್ಲಿ ಜಮೀನು ಖರೀದಿಸಿ ಕಚೇರಿಗಳನ್ನು ಸ್ಥಾಪಿಸಲಾಗಿದೆ. ಇಂತಹ ಸಂದರ್ಭದಲ್ಲಿ ಏಕಾಏಕಿ ಕಚೇರಿ ಸ್ಥಳಾಂತರಿಸಲು ಮುಂದಾಗಿರುವುದು ರೈತರಲ್ಲಿ ಆತಂಕ ಮೂಡಿಸಿದೆ ಎಂದು ತಿಳಿಸಿದರು.

ಕಚೇರಿಗಳ ಸ್ಥಳಾಂತರದಿಂದ ಕಾಲುವೆ ನೀರಿನ ನಿರ್ವಹಣೆ, ದುರಸ್ತಿ ಕಾಮಗಾರಿ ಮತ್ತು ರೈತರ ಅಹವಾಲುಗಳಿಗೆ ಸ್ಪಂದಿಸುವಲ್ಲಿ ಸಮಸ್ಯೆಗಳು ಹೆಚ್ಚಾಗುವ ಸಾಧ್ಯತೆ ಇದೆ. ಎನ್ ಆರ್‌ಬಿಸಿ ಕಾಲುವೆಯನ್ನು 157ನೇ ಕಿ.ಮೀ. ವರೆಗೆ ವಿಸ್ತರಿಸುವ ಉದ್ದೇಶದಿಂದ ಕಚೇರಿ ಸ್ಥಳಾಂತರಿಸಲಾಗುತ್ತಿದೆ ಎನ್ನಲಾಗುತ್ತಿದ್ದು, ವಿಭಾಗೀಯ ಕಚೇರಿಯನ್ನು ಸ್ಥಳಾಂತರಿಸುವ ಬದಲು ಅಗತ್ಯವಿದ್ದಲ್ಲಿ ಹೊಸ ಉಪವಿಭಾಗ ಕಚೇರಿಗಳನ್ನು ಆರಂಭಿಸಬಹುದು 2ನೇ ಪುಟಕ್ಕೆ

# ಪತ್ನಿ ಕೊಲೆಯತ್ನ ಪ್ರಕರಣ: ಆರೋಪಿಗೆ 5 ವರ್ಷ ಕಠಿಣ ಕಾರಾಗೃಹ

ರಾಯಚೂರು, ಸೆ.17: ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪತ್ನಿಯನ್ನು ಕೊಲೆ ಮಾಡಲು ಯತ್ನಿಸಿದ ಪ್ರಕರಣದಲ್ಲಿ ಆರೋಪಿಗೆ 5 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ₹17 ಸಾವಿರ ದಂಡ ವಿಧಿಸಿ ನ್ಯಾಯಾಲಯ ತೀರ್ಪು ನೀಡಿದೆ.

2022ರ ಜನವರಿ 21ರಂದು ನಡೆದ ಘಟನೆಗೆ ಸಂಬಂಧಿಸಿದಂತೆ ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖೆ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರ ಸಲ್ಲಿಸಲಾಗಿತ್ತು. ಪ್ರಕರಣದ ವಿಚಾರಣೆ ನಡೆಸಿದ ರಾಯಚೂರಿನ 3ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಸಿಂಧನೂರು ಪೀಠವು ಸೆ.2ರಂದು ಆರೋಪಿಗೆ ಶಿಕ್ಷೆ ವಿಧಿಸಿದೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಮಂಜುನಾಥ ಬೇಲೇರಿ ವಾದ ಮಂಡಿಸಿದ್ದರು.

# ಅತ್ಯಾಚಾರ ಪ್ರಕರಣ: ಆರೋಪಿಗೆ ಜೀವಾವಧಿ ಶಿಕ್ಷೆ, ₹1.05 ಲಕ್ಷ ದಂಡ

ರಾಯಚೂರು, ಸೆ.17: ಲಿಂಗಸುಗೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದ್ದ ಅತ್ಯಾಚಾರ ಪ್ರಕರಣದಲ್ಲಿ ಆರೋಪಿಗೆ ಜೀವಾವಧಿ ಶಿಕ್ಷೆ ಹಾಗೂ ₹1.05 ಲಕ್ಷ ದಂಡ ವಿಧಿಸಿ ನ್ಯಾಯಾಲಯ ತೀರ್ಪು ನೀಡಿದೆ.

2024ರಲ್ಲಿ ದಾಖಲಾಗಿದ್ದ ಪ್ರಕರಣದ ತನಿಖೆ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರ ಸಲ್ಲಿಸಲಾಗಿತ್ತು. ಪ್ರಕರಣದ ವಿಚಾರಣೆ ನಡೆಸಿದ ರಾಯಚೂರಿನ 3ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಲಿಂಗಸುಗೂರು ಪೀಠವು ಆ.3ರಂದು ಆರೋಪಿಯನ್ನು ತಪ್ಪಿತಸ್ಥನೆಂದು ಪರಿಗಣಿಸಿ ಜೀವಾವಧಿ ಶಿಕ್ಷೆ ವಿಧಿಸಿದೆ. ವಿಧಿಸಲಾದ ದಂಡದ ಮೊತ್ತದಲ್ಲಿ ₹1 ಲಕ್ಷವನ್ನು ಸಂತ್ರಸ್ತೆಗೆ ನೀಡುವಂತೆ ನ್ಯಾಯಾಲಯ ಆದೇಶಿಸಿದೆ.

# ಸೆ. 19ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ರಾಯಚೂರು ಸೆಪ್ಟಂಬರ್ 17 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಕಚೇರಿ, ಕೆ.ಇ.ಬಿ ಕ್ವಾರ್ಸ್, ಡಿ.ಸಿ ಮನೆ ಎದುರುಗಡೆ, ಲಿಂಗಸೂಗೂರು ರೋಡ್ ರಾಯಚೂರಿನಲ್ಲಿ ಸೆಪ್ಟಂಬರ್ 19ರ ಬೆಳಿಗ್ಗೆ 11ಗಂಟೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ವಿದ್ಯುತ್ ದೂರುಗಳ ಬಗ್ಗೆ ಸಭೆಗೆ ಹಾಜರಾಗಿ ದೂರನ್ನು ಇತ್ಯರ್ಥಪಡಿಸಿಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಂದಿನಿ ಶಿಕ್ಷಣ ಸಂಸ್ಥೆಯಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವ




ರಾಯಚೂರು: ಡಾ. ನರಸಿಂಹಲು ನಂದಿನಿ ಸ್ಮಾರಕ ಶಿಕ್ಷಣ ಸಂಸ್ಥೆಯಿಂದ ಸಂಚಾಲಿತ ನಂದಿನಿ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ಹಾಗೂ ಶಿಕ್ಷಣ ಮಹಾವಿದ್ಯಾಲಯಗಳ ಸಹಯೋಗದಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವವನ್ನು ನಂದಿನಿ ಶಿಕ್ಷಣ ಮಹಾವಿದ್ಯಾಲಯದ ಮೈದಾನದಲ್ಲಿ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಧ್ವಜಾರೋಹಣ ನೆರವೇರಿಸಿದ ಪ್ರಾಚಾರ್ಯೆ ಡಾ. ಆಲಿಸ್ ಜೋಸೆಫ್ ಮಾತನಾಡಿ, ಅನೇಕ ಹೋರಾಟಗಾರರ ತ್ಯಾಗ ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ನೇತೃತ್ವದ ಆಪರೇಷನ್ ಪೋಲೋ ಮೂಲಕ ಹೈದರಾಬಾದ್ ಸಂಸ್ಥಾನವು ಭಾರತದ ಒಕ್ಕೂಟಕ್ಕೆ ಸೇರ್ಪಡೆಯಾಯಿತು ಎಂದು ಹೇಳಿದರು. ವಿದ್ಯಾರ್ಥಿಗಳು 371(ಜೆ) ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮುಖ್ಯ ಭಾಷಣಕಾರರಾದ ಸಹಾಯಕ ಪ್ರಾಧ್ಯಾಪಕ ನರಸಿಂಹ ಹೊಸೂರು ಮಾತನಾಡಿ, ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟ, ರಜಾಕಾರರ ದೌರ್ಜನ್ಯ ಹಾಗೂ ಹೋರಾಟಗಾರರ ತ್ಯಾಗ-ಬಲಿದಾನಗಳನ್ನು ಸ್ಮರಿಸಿ, ಅವರ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ವಂದನಾ, ಬಸವರಾಜೇಶ್ವರಿ, ರಮೇಶ್, ಎನ್. ರಾಜೇಶ್ವರಿ ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು. ಬಸವರಾಜೇಶ್ವರಿ ಸ್ವಾಗತಿಸಿದರು, ವೀರಭದ್ರಯ್ಯ ವಿರಕ್ತಿಮಠ ವಂದಿಸಿದರು. ಡಾ. ಬಿ. ವಿಜಯ ರಾಜೇಂದ್ರ ಕಾರ್ಯಕ್ರಮ ನಿರೂಪಿಸಿದರು.

**ಅಮೃತ ವಾಣಿ**

**ಅಕ್ಷರ ಜ್ಞಾನವೇ ಬದುಕಿನ ಅದ್ಭುತ ಬೆಳಕು.**

1589 ನೆಯ ದಿನಕ್ಕೆ ಏಮ್ಸ್ ಹೋರಾಟ
अखिल भारतीय आयुर्विज्ञान संस्थान ALL INDIA INSTITUTE OF MEDICAL SCIENCES शरीरमाद्यं खलु धर्मसाधनम्

# ಅನೇಕರ ತ್ಯಾಗದಿಂದ ಕಲ್ಯಾಣ ಕರ್ನಾಟಕಕ್ಕೆ ಸ್ವಾತಂತ್ರ್ಯ ದೊರಕಿದೆ



ಸಿಂಧನೂರು: ಅನೇಕರ ತ್ಯಾಗ ಮತ್ತು ಬಲಿದಾನಗಳಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ ಸ್ವಾತಂತ್ರ್ಯ ದೊರಕಿದೆ ಎಂದು ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಬಾದರ್ಲಿ ಹೇಳಿದರು. ನಗರದ ಪಿ.ಎಂ.ಶ್ರೀ ಆದರ್ಶ ವಿದ್ಯಾಲಯ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶಕ್ಕೆ 1947ರ ಆಗಸ್ಟ್ 15ರಂದು ಸ್ವಾತಂತ್ರ್ಯ ದೊರೆತರೂ ಕಲ್ಯಾಣ ಕರ್ನಾಟಕ ಭಾಗದ ರಾಯಚೂರು, ಕೊಪ್ಪಳ, ಬೀದರ್, ಕಲಬುರಗಿ, ಬಳ್ಳಾರಿ, ಯಾದಗಿರಿ, ವಿಜಯನಗರ ಸೇರಿದಂತೆ ಅಂದಿನ ಹೈದರಾಬಾದ್ ಸಂಸ್ಥಾನಕ್ಕೆ ಒಳಪಟ್ಟಿದ್ದ ಪ್ರದೇಶಗಳು ತಕ್ಷಣವೇ ಸ್ವಾತಂತ್ರ್ಯ ಪಡೆದಿರಲಿಲ್ಲ. ಈ ಭಾಗದ ಅನೇಕ ಸ್ವಾತಂತ್ರ್ಯ ಹೋರಾಟಗಾರರು ಹೈದರಾಬಾದ್ ನಿಜಾಮನ ಅಧಿಪತ್ಯವನ್ನು ಕೊನೆಗಾಣಿಸಲು ತಮ್ಮ ಜೀವದ ಹಂಗು ತೊರೆದು ಹೋರಾಟ ನಡೆಸಿದ್ದರು. ಇದರ ಫಲವಾಗಿ ಅಂದಿನ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ನೇತೃತ್ವದಲ್ಲಿ ನಡೆದ ಆಪರೇಷನ್ ಪೋಲೋ ಸೈನಿಕ ಕಾರ್ಯಾಚರಣೆಯ ನಂತರ ಹೈದರಾಬಾದ್ ಸಂಸ್ಥಾನ ಭಾರತೀಯ ಒಕ್ಕೂಟಕ್ಕೆ ಸೇರ್ಪಡೆಯಾಯಿತು. ಇಂತಹ ಇತಿಹಾಸವನ್ನು ವೈಜ್ಞಾನಿಕ ದೃಷ್ಟಿಕೋನದಿಂದ ಅವಲೋಕಿಸಿ ಮುಂದಿನ ಪೀಳಿಗೆಗೆ ತಿಳಿಸಬೇಕಾಗಿದೆ ಎಂದರು.

ಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯ ವೀರೇಶ ಗೋನವಾರ ಮಾತನಾಡಿ, ಹೈದರಾಬಾದ್ ಕರ್ನಾಟಕ ವಿಮೋಚನಾ ಚಳುವಳಿಯಲ್ಲಿ ಯಾವುದೇ ಜಾತಿ, ಧರ್ಮದ ಭೇದವಿಲ್ಲದೆ ಈ ಭಾಗವನ್ನು ಸ್ವಾತಂತ್ರ್ಯಗೊಳಿಸಬೇಕು ಎಂಬ ಉದ್ದೇಶದಿಂದ ಅನೇಕರು ಹೋರಾಟ ನಡೆಸಿ ಪ್ರಾಣ ತ್ಯಾಗ ಮಾಡಿದ್ದಾರೆ. ಹೈದರಾಬಾದ್‌ನ ಪತ್ರಕರ್ತ ಶೋಯಬುಲ್ಲಾ ಖಾನ್ ಅವರು ನಿಜಾಮನ ವಿರುದ್ಧ ಪತ್ರಿಕೆಯಲ್ಲಿ ಲೇಖನಗಳನ್ನು ಬರೆದ ಹಿನ್ನೆಲೆಯಲ್ಲಿ ನಿಜಾಮನ ಸೈನಿಕರಿಂದ ಹತ್ಯೆಗೀಡಾದರು. ನಮ್ಮ ಭಾಗದಲ್ಲಿ ಹೈದರಾಬಾದ್ ಕರ್ನಾಟಕ ವಿಮೋಚನಾ ಚಳುವಳಿ ಉತ್ತುಂಗದಲ್ಲಿದ್ದ ಸಂದರ್ಭದಲ್ಲಿ ಎಂ. ನಾಗಪ್ಪ ಅವರು ರಾಯಚೂರಿನ ಸಾತ್ ಕಚೇರಿ ಮೇಲೆ ತ್ರಿವರ್ಣ ಧ್ವಜ ಹಾರಿಸುವ ಮೂಲಕ ತಮ್ಮ ಕೆಚ್ಚೆದೆಯನ್ನು ಮೆರೆದಿದ್ದರು ಎಂದು ಸ್ಮರಿಸಿದರು.

ಕನ್ನಡ ಭಾಷಾ ಶಿಕ್ಷಕ ಭೀಮರೆಡ್ಡಿ ಮಾತನಾಡಿ, ಬೀದರ್ ಜಿಲ್ಲೆಯ ಇಡೀ ಗೋರಟ ಗ್ರಾಮವೇ ನಿಜಾಮನ ವಿರುದ್ಧ ಹೋರಾಟ ನಡೆಸಿತ್ತು. ಮಾಜಿ ಸಂಸದ ರಾಮಚಂದ್ರ ವೀರಪ್ಪ ಅವರು ಕೂಡ ಈ ಚಳುವಳಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ರಜಾಕಾರರ ದಬ್ಬಾಳಿಕೆಯಿಂದ ಮಹಿಳೆಯರು, ವೃದ್ಧರು ಸೇರಿದಂತೆ ಅನೇಕರು ದೌರ್ಜನ್ಯಕ್ಕೆ ಒಳಗಾಗಿದ್ದರು. ಅಂದಿನ ಘಟನೆಗಳನ್ನು ಇತಿಹಾಸದ ಪುಟಗಳಿಂದ ತಿಳಿದುಕೊಂಡು ಮುಂದಿನ ಪೀಳಿಗೆಗೆ ತಲುಪಿಸಬೇಕಾಗಿದೆ ಎಂದರು. ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಮೈಹಿಬೂಬ್ ಸಾಬ್ ಮಾತನಾಡಿದರು. ವಿದ್ಯಾರ್ಥಿನಿಯರಾದ ಅಶ್ವಿನಿ, ಸಾನ್ವಿ, ಶ್ರೀರಕ್ಷಾ ಸೇರಿದಂತೆ ಅನೇಕರು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ವೇದಿಕೆಯಲ್ಲಿ ಎಸ್‌ಡಿಎಂಸಿ ಸದಸ್ಯ ಶೇಖರಯ್ಯ ಸ್ವಾಮಿ ಜವಳಗೇರಾ, ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಹಾಗೂ ಶಾಲೆಯ ಶಿಕ್ಷಕರಾದ ಮೌನೇಶಪ್ಪ, ಬಸವರಾಜ ಆನೆಗುಂದಿ, ಉಮೇಶ, ದೈಹಿಕ ಶಿಕ್ಷಕ ಮೌನೇಶ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಗಣಿತ ಶಿಕ್ಷಕ ಸಾವನ್ ಕೆ ಸ್ವಾಗತಿಸಿದರು. ಶಿಕ್ಷಕ ಜಡೇಶ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿನಿ ಲಕ್ಷ್ಮೀ ಪ್ರಿಯ ಪ್ರಾರ್ಥಿಸಿದರು. ಇಂಗ್ಲಿಷ್ ಭಾಷಾ ಶಿಕ್ಷಕ ಮಲ್ಲಪ್ಪ ಕೆ ವಂದಿಸಿದರು.

# ದಾಖಲೆ ಡಿಜಿಟಲೀಕರಣ ಕೊಠಡಿಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ

ಪರಿಣಾಮಕಾರಿಯಾಗಿ ನಿರ್ವಹಿಸಲಾಗುತ್ತದೆ. ಅಲ್ಲದೆ ಜನನ ಮತ್ತು ಮರಣ ಪ್ರಮಾಣ ಪತ್ರಗಳು, ಖಾತೆ/ಮ್ಯುಟೇಶನ್ ಅರ್ಜಿಗಳು ಹಾಗೂ ಆರ್.ಟಿ.ಐ ಅರ್ಜಿಗಳಿಗೆ ಸ್ಪಷ್ಟವಾದ ಪ್ರಕ್ರಿಯೆ, ಟ್ರ್ಯಾಕಿಂಗ್ ವ್ಯವಸ್ಥೆ ಮತ್ತು ನಿಗದಿತ ಕಾಲಮಿತಿಯನ್ನು ರೂಪಿಸಲಾಗುವುದೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ ಅವರು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್ .ಭೋಸುರಾಜು, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಶರಣಪ್ಪ ಸೇರಿದಂತೆ ಪಾಲಿಕೆಯ ವಿವಿಧ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಸಚಿವರಿಂದ ಪ್ರಶಸ್ತಿ ಪತ್ರ ವಿತರಣೆ

ಚಿತ್ರಕಲಾ ಸ್ಪರ್ಧೆಯ ವಿಜೇತ ವಿದ್ಯಾರ್ಥಿಗಳು: ಕೊಪ್ಪಳ ಜಿಲ್ಲೆಯ ಕುಕನೂರು ತಾಲ್ಲೂಕಿನ ಇಟ್ಟಗಿ ಗ್ರಾಮದ ಪಿ.ಎಂ.ಶ್ರೀ. ಆದರ್ಶ ವಿದ್ಯಾಲಯದ 9ನೇ ತರಗತಿಯ ವಿದ್ಯಾರ್ಥಿನಿ ಕುಮಾರಿ. ನಾಗರತ್ನ ಯತ್ನಟ್ಟಿ ಅವರು ಪ್ರಥಮ ಬಹುಮಾನ, ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಭಾತಂಬ್ರಾ ಸರಕಾರಿ ಪ್ರೌಢ ಶಾಲೆಯ 9ನೇ ತರಗತಿಯ ವಿದ್ಯಾರ್ಥಿ ಕುಮಾರಿ. ಮಾಹಿನ್ ರಸೂಲ್ ದ್ವಿತೀಯ ಬಹುಮಾನ ಹಾಗೂ ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಅನಂತಶಯನ ಗುಡಿ ಸರಕಾರಿ ಪ್ರೌಢ ಶಾಲೆಯ 9ನೇ ತರಗತಿಯ ವಿದ್ಯಾರ್ಥಿ ಕುಮಾರ. ಎಂ. ಯಮನೂರಪ್ಪ ಅವರು ತೃತೀಯ ಬಹುಮಾನ ಪಡೆದರು.

ಇದೇ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್ .ಭೋಸುರಾಜು, ವಿಧಾನ ಪರಿಷತ್ ಸದಸ್ಯರಾದ ವಸಂತ ಕುಮಾರ, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಹಿರಿಯ ಭೂವಿಜ್ಞಾನಿಗಳಾದ ಅರುಣ್ ಡಿ.ಇ. ಸೇರಿದಂತೆ ಇತರರು ಇದ್ದರು.

# ವಿಶ್ವಕರ್ಮರ ಆದರ್ಶವನ್ನು ಅಳವಡಿಸಿಕೊಳ್ಳಿ: ಡಾ.ವಿಶ್ವನಾಥ ಎಸ್.ಪತ್ತಾರ

ಜಾಗೃತರಾಗಬೇಕಿದೆ ಎಂದರು.

ಈ ವೇಳೆ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಜಿಲ್ಲಾಧ್ಯಕ್ಷರಾದ ಉದಯಕುಮಾರ್ ಪತ್ತಾರ ಅವರು ಮಾತನಾಡಿ, ರಾಯಚೂರು ಜಿಲ್ಲೆಯು ಸಂಘಟನೆಯ ಶಕ್ತಿಗೆ ಹೆಸರುವಾಸಿಯಾಗಿದೆ. ಈ ಹಿಂದೆ ಎಸ್.ಟಿ. ಮೀಸಲಾತಿಗಾಗಿ ನಡೆದ 100 ಕಿ.ಮೀ. ಪಾದಯಾತ್ರೆ, ಬೃಹತ್ ಸಮಾವೇಶಗಳು ಹಾಗೂ ಪಂಜಿನ ಮೆರವಣಿಗೆಗಳು ನಮ್ಮ ಒಗ್ಗಟ್ಟಿಗೆ ಸಾಕ್ಷಿಯಾಗಿದೆ ಎಂದರು.

ಮುಂಬರುವ ದಿನಗಳಲ್ಲಿ ಜಯಂತಿಗಳಿಗೆ ಮುಂಚಿತವಾಗಿಯೇ ವ್ಯವಸ್ಥಿತ ಯೋಜನೆ ರೂಪಿಸಲಾಗುವುದು. ನವೆಂಬರ್ ತಿಂಗಳಲ್ಲಿ ನಮ್ಮ ವಿಶ್ವಕರ್ಮ ಸಮಾಜವನ್ನು ಬಲಗೊಳಿಸಲು 7 ಸಚಿವರನ್ನು ಆಹ್ವಾನಿಸಿ ಬೃಹತ್ ಜನಜಾಗೃತಿ ಸಮಾವೇಶ ನಡೆಸಲು ತೀರ್ಮಾನಿಸಲಾಗಿದೆ. ಸಮಾಜದ ಸಬಲೀಕರಣಕ್ಕಾಗಿ ಪ್ರತಿಯೊಬ್ಬರೂ ತನು, ಮನ, ಧನದ ಸಹಕಾರ ನೀಡಬೇಕು ಎಂದರು.

ಇದೇ ಸಂದರ್ಭದಲ್ಲಿ ದೇವದುರ್ಗದ ಶ್ರೀಮದ್ ಆನೆಗುಂದಿ ಮೂಲ ಸಂಸ್ಥಾನ ಸರಸ್ವತಿ ಪೀಠದ ಪರಮಪೂಜ್ಯ ಶ್ರೀ ಶ್ರೀ ಮೌನೇಶ್ವರ ಮಹಾಸ್ವಾಮಿಗಳು, ಶಿವಜವಳಗೇರಾ ಶ್ರೀಮದ್ ಆನೆಗುಂದಿ ಮಹಾಸಂಸ್ಥಾನ ವಿಶ್ವಕರ್ಮ ಏಕದಂಡಿಗಿ ಮಠದ ಪರಮಪೂಜ್ಯ ಶ್ರೀಶ್ರೀ ಸೂರ್ಯ ನಾರಾಯಣ ಮಹಾಸ್ವಾಮಿಗಳು, ಮಹಾನಗರ ಪಾಲಿಕೆಯ ವ್ಯವಸ್ಥಾಪಕರಾದ ರಾಜು, ಉಪ ತಹಶಿಲ್ದಾರ್ ಪರಶುರಾಮ, ಅಂಬಾರಾಯ ಕೆ. ನಂಜುಡಾಚಾರಿ ಗಾಣಧಾಳ, ಬ್ರಹ್ಮಣ್ಯಗೌಡ ನಿಕೇತನ, ಡಿ.ವೆಂಕಟೇಶ ಡಾ.ಮನೋಹರ ವೈ. ಪತ್ತಾರ, ಬ್ರಹ್ಮಯ್ಯ ಪತ್ತಾರ ಕಲ್ಲೂರು, ಕೆ.ಶೇಷ ಲಕ್ಷ್ಮೀಪತಿ ಯರಗೇರಾ, ಎಂ.ಕೆ. ಹರಿನಾಥ್ ಕೆ. ಸರಸ್ವತಿ, ಮಂಜುನಾಥ್ ವಿಶ್ವಕರ್ಮ, ಈರಣ್ಣ ವಡಿಗೇರ, ಇತರರು ಇದ್ದರು.

ಕೆ.ರಾಮು ಗಾಣಧಾಳ ಅವರು ಸ್ವಾಗತ ಮಾಡಿದರು. ರೇಖಾ ಪಾಟೀಲ್ ಅವರು ಕಾರ್ಯಕ್ರಮವನ್ನು ನಡೆಸಿಕೊಟ್ಟರು.

ಮೆರವಣಿಗೆ: ವಿಶ್ವಕರ್ಮ ಜಯಂತಿ ಅಂಗವಾಗಿ ರಾಯಚೂರು ನಗರದ ಆಕಾಶವಾಣಿ ಹತ್ತಿರದ ವಿಶ್ವಕರ್ಮ ವೃತ್ತಕ್ಕೆ ಪೂಜೆ ಸಲ್ಲಿಸಿ, ನೇತಾಜಿ ವೃತ್ತ, ತೀನ್ ಕಂದಿಲ್, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ರಂಗಮದಿರದ ವರೆಗೆ ವಿಶ್ವಕರ್ಮರ ಭಾವಚಿತ್ರದೊಂದಿಗೆ ಮೆರವಣಿಗೆ ಮಾಡಲಾಯಿತು.

ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಸೇರಿದಂತೆ ವಿವಿಧ ಗಣ್ಯರು ಮೆರವಣಿಗೆಗೆ ಚಾಲನೆ ನೀಡಿದರು.

# ಚಿಕ್ಕಹೊನ್ನಕುಣಿ ಕೆಬಿಜೆಎನ್‌ಎಲ್ ಕಚೇರಿ ಸ್ಥಳಾಂತರ ವಿರೋಧಿಸಿ ಸೆ.28ರಂದು ಬೃಹತ್ ಧರಣಿ: ಶಾಸಕಿ ಕರೆಮ್ಮ ಜಿ. ನಾಯಕ

ಎಂದು ಅಭಿಪ್ರಾಯಪಟ್ಟರು.

ಕ್ಷೇತ್ರದಲ್ಲಿದ್ದಕಾರಾಗೃಹಹಾಗೂಭೂಸ್ವಾಧೀನಕಚೇರಿಗಳನ್ನುಈಗಾಗಲೇರಾಯಚೂರಿಗೆಸ್ಥಳಾಂತರಿಸಲಾಗಿದೆ. ಇದೀಗ ನೀರಾವರಿ ಇಲಾಖೆಯ ಕಚೇರಿಯನ್ನೂ ಸ್ಥಳಾಂತರಿಸುವ ಕ್ರಮ ರೈತ ಸಮುದಾಯಕ್ಕೆ ತೊಂದರೆ ಉಂಟುಮಾಡಲಿದೆ ಎಂದು ಅವರು ಆರೋಪಿಸಿದರು. ವಿರೋಧ ಪಕ್ಷದ ಮಹಿಳಾ ಶಾಸಕಿ ಪ್ರತಿನಿಧಿಸುವ ಕ್ಷೇತ್ರ ಎಂಬ ಕಾರಣಕ್ಕೆ ಸರ್ಕಾರ ಸಮಸ್ಯೆ ಸೃಷ್ಟಿಸುತ್ತಿದೆ ಎಂಬುದು ತಮ್ಮ ಆರೋಪ ಎಂದು ಹೇಳಿದರು.

ಕೆಬಿಜೆಎನ್‌ಎಲ್‌ನ ಹಿಂದಿನ ನಿರ್ಧಾರದಂತೆ ಚಿಕ್ಕಹೊನ್ನಕುಣಿಯಲ್ಲಿಯೇ ಮುಖ್ಯ ಇಂಜಿನಿಯರ್ ಹಾಗೂ ಅಧೀಕ್ಷಕ ಇಂಜಿನಿಯರ್ ಕಚೇರಿಗಳನ್ನು ಆರಂಭಿಸಬೇಕು. ಅಲ್ಲದೆ, ಪ್ರಸ್ತುತ ಕಚೇರಿಗಳ ಸ್ಥಳಾಂತರ ಆದೇಶವನ್ನು ತಕ್ಷಣ ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಈ ಬೇಡಿಕೆ ಮುಂದಿಟ್ಟುಕೊಂಡು ಸೆ.28ರಂದು ಚಿಕ್ಕಹೊನ್ನಕುಣಿಯಲ್ಲಿ ಜೆಡಿಎಸ್ ವತಿಯಿಂದ ಬೃಹತ್ ಧರಣಿ ನಡೆಸಲಾಗುವುದು ಎಂದು ಶಾಸಕಿ ಕರೆಮ್ಮ ಜಿ. ನಾಯಕ ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಜೆಡಿಎಸ್ ಅಧ್ಯಕ್ಷ ಬಸನಗೌಡ ದೇಸಾಯಿ, ಅರಕೇರಾ ತಾಲೂಕು ಜೆಡಿಎಸ್ ಅಧ್ಯಕ್ಷ ಸಿದ್ದಣ್ಣ ಬಿ. ಗಣೇಕಲ್, ಮುಖಂಡರಾದ ಅಮರೇಶ ಪಾಟೀಲ್ ಪರ್ತಾಪುರ, ಹನುಮಂತ್ರಾಯ ನಾಯಕ ಚಿಂತಲಕುಂಟಿ, ಚನ್ನಪ್ಪ ನಾಯಕ ಮಸೀದಿಪುರ, ಗೋವಿಂದರಾಜ್ ಕೊತ್ತದೊಡ್ಡಿ, ಮಹಬೂಬಸಾಬ್ ಹೆಗ್ಗಡದಿನ್ನಿ ಹಾಗೂ ರಮೇಶ ರಾಮನಾಳ ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಕಲ್ಯಾಣ ಕರ್ನಾಟಕವನ್ನು ರಾಜ್ಯದ ಮಾದರಿ ಪ್ರದೇಶವನ್ನಾಗಿ ಮಾಡಲು ನಮ್ಮ ಸರ್ಕಾರ ಬದ್ಧ: ಡಾ.ಅಜಯ್ ಧರ್ಮಸಿಂಗ್

ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಂತರ್ಜಲ ಅಭಿವೃದ್ಧಿಗೆ ಈಗಾಗಲೇ 200 ಕೋಟಿ ಬಿಡುಗಡೆ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಹೆಚ್ಚುವರಿಯಾಗಿ 250 ಕೋಟಿ ನೀಡಲಾಗುವುದು. ಅಲ್ಲದೆ ಕಲ್ಯಾಣ ಪಥ ಯೋಜನೆಯಡಿ ಕಲ್ಯಾಣ ಕರ್ನಾಟಕದ 38 ವಿಧಾನಸಭಾ ಕ್ಷೇತ್ರಗಳಲ್ಲಿ ಮೂಲಭೂತ ರಸ್ತೆ ಸೌಕರ್ಯ ಸುಧಾರಿಸಲು 1000 ಕೋಟಿ ವೆಚ್ಚದಲ್ಲಿ ಸುಮಾರು 1,150 ಕಿಲೋಮೀಟರ್ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸರ್ಕಾರ ಬದ್ಧ: ಕಲ್ಯಾಣ ಕರ್ನಾಟಕ ಭಾಗದ ಸರ್ವತೋಮುಖ ಅಭಿವೃದ್ಧಿ ಹಾಗೂ ಸುಡಳಿತಕ್ಕೆ ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ. ಹೊಸ ತಾಲೂಕುಗಳ ಘೋಷಣೆಯಾಗಿ ಸುಮಾರು ಏಳು ವರ್ಷಗಳು ಕಳೆದಿರುವ ಹಿನ್ನೆಲೆಯಲ್ಲಿ, ಆಡಳಿತ ಯಂತ್ರವನ್ನು ಮತ್ತಷ್ಟು ಬಲಪಡಿಸಲು ಮತ್ತು ಸಾರ್ವಜನಿಕ ಸೇವೆಗಳನ್ನು ತಲುಪಿಸಲು ಹಲವು ಮಹತ್ವದ ಹೆಜ್ಜೆಗಳನ್ನು ಇಡಲಾಗಿದೆ. ಅವುಗಳಲ್ಲಿ ನೂತನ ತಾಲೂಕುಗಳ ಪ್ರಜಾಸೌಧ ನಿರ್ಮಾಣ, ಇಂಡಸ್ಟ್ರಿಯಲ್ ಹಬ್‌ಗಳ ಸ್ಥಾಪನೆ ಹಾಗೂ ಕಲ್ಯಾಣ ಕರ್ನಾಟಕ ಆಡಳಿತ ಸುಧಾರಣೆಗೆ ಸಂಬಧಿಸಿದತೆ ನಿರಂತರ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಆಡಳಿತ ಸುಧಾರಣೆಗೆ ಸಂಬಧಿಸಿದತೆ ಪ್ರೊಫೆಸರ್ ಗೋವಿಂದರಾವ್ ಅವರ ಅಧ್ಯಕ್ಷತೆಯ ಸಮಿತಿಯು ಮಹತ್ವದ ವರದಿಯನ್ನು ಸಲ್ಲಿಸಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಲು ಡಾ. ಛಾಯಾ ದೇವಗಾಂವ್ಕರ್ ಅವರ ನೇತೃತ್ವದಲ್ಲಿ ಶಿಕ್ಷಣ ತಜ್ಞರ ಸಮಿತಿ ರಚಿಸಲಾಗಿದ್ದು, ಈ ಭಾಗದ ಶಿಕ್ಷಣ ಸುಧಾರಣೆಗೆ ಸಂಬಧಿಸಿದ ವರದಿಯನ್ನು ಸಲ್ಲಿಸಲಾಗಿದೆ ಎಂದರು.

ದೃಢ ಸಂಕಲ್ಪ ಕಾರ್ಯಕ್ರಮ: ಮುಖ್ಯಮಂತ್ರಿಗಳಾದ ಸನ್ಮಾನ್ಯ ಡಿ.ಕೆ. ಶಿವಕುಮಾರ್ ಅವರ ಉಪಸ್ಥಿತಿಯಲ್ಲಿ ಕಳೆದ 100 ದಿನಗಳ ಸಾಧನೆ ಹಾಗೂ ಮುಂದಿನ 500 ದಿನಗಳಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಯೋಜನೆಗಳ ಕುರಿತು ದೃಢ ಸಂಕಲ್ಪ ಕಾರ್ಯಕ್ರಮದಲ್ಲಿ ಚರ್ಚಿಸಿ, ಕಾರ್ಯತಂತ್ರ ರೂಪಿಸಲಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರವು ಎಂತಹದೇ ಸವಾಲುಗಳಿದ್ದರೂ ಬದ್ಧತೆಯಿಂದ ಕೆಲಸ ಮಾಡಲಿದೆ ಎಂದರು.

ಈ ವೇಳೆ ಪಥ ಸಂಚಲನದಲ್ಲಿ ಭಾಗವಹಿಸಿ ಪೊಲೀಸ ಸೇರಿದಂತೆ ವಿವಿಧ ತುಕಡಿಗಳಿಂದ ಗೌರವ ವಂದನೆ ಸ್ವೀಕರಿಸಿದರು.

ಇದೇ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್ .ಭೋಸುರಾಜು, ವಿಧಾನ ಪರಿಷತ್ ಸದಸ್ಯರಾದ ವಸಂತ ಕುಮಾರ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಜಿ.ಹರೀಶ್, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಯುವ ಸಬಲೀಕರಣ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ, ಮುಖಂಡರಾದ ಕೆ.ಶಾಂತಪ್ಪ, ಜಿಂದಪ್ಪ, ಜಯಣ್ಣ, ಪತಂಗೆ ಜಯವಂತ ರಾವ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ವಿವಿಧ ಸಂಘಟನೆಯ ಮುಖಂಡರು, ವಿದ್ಯಾರ್ಥಿಗಳು ಇದ್ದರು.

ಅಸ್ಕಿಹಾಳ ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕಿ ಯಶೋಧ ಹಾಗೂ ಗಾಜಗಣಪೇಠ ಸರ್ಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕಿ ಮಹೇಶ್ವರಿ ಕಾರ್ಯಕ್ರಮ ನಡೆಸಿಕೊಟ್ಟರು.

# ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಶಾಸಕ ಬಸನಗೌಡ ದದ್ದಲ್ ಭಾಗಿ

ಪ್ರಗತಿ ಸಾಧಿಸುವ ಮೂಲಕ ಕಲ್ಯಾಣ ಕರ್ನಾಟಕವನ್ನು ಅಭಿವೃದ್ಧಿಯ ಮುಂಚೂಣಿಗೆ ತರುವ ಅಗತ್ಯವಿದೆ. ಇದಕ್ಕಾಗಿ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದರ ಜೊತೆಗೆ ಎಲ್ಲರೂ ಸಹಕಾರದಿಂದ ಮುನ್ನಡೆಯಬೇಕು ಎಂದು ಹೇಳಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಎಂದರೆ ಈ ಭಾಗದ ಪ್ರತಿಯೊಬ್ಬರ ಬದುಕಿನ ಗುಣಮಟ್ಟವನ್ನು ಉತ್ತಮಪಡಿಸುವುದು. ಜನಕಲ್ಯಾಣ ಹಾಗೂ ಸಮಗ್ರ ಪ್ರಗತಿಯನ್ನು ಗುರಿಯಾಗಿಸಿಕೊಂಡು ಸರ್ಕಾರದೊಂದಿಗೆ ಕೈಜೋಡಿಸಿ ಕಾರ್ಯನಿರ್ವಹಿಸೋಣ ಎಂದು ಶಾಸಕ ಬಸನಗೌಡ ದದ್ದಲ್ ಕರೆ ನೀಡಿದರು.

# ರೈತರ ಬಾಕಿ ₹109 ಕೋಟಿ ಶೀಘ್ರ ಪಾವತಿಗೆ ಕ್ರಮ: ಸಚಿವ ಡಾ. ಅಜಯ್ ಧರ್ಮಸಿಂಗ್

ಮಂತ್ರಿಗಳೊಂದಿಗೆ ಚರ್ಚಿಸಿ ಬಾಕಿ ಮೊತ್ತವನ್ನು ಶೀಘ್ರ ಪಾವತಿಸುವ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಕುರಿತು ಈಗಾಗಲೇ ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದ್ದು, ಇನ್ನೂ ಮೂರು ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ಅಗತ್ಯವಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರತಿವರ್ಷ ₹5,000 ಕೋಟಿ ಅನುದಾನ ನೀಡಲಾಗುತ್ತಿದೆ. 2013ರಿಂದ ಈ ಭಾಗದಲ್ಲಿ ಶಿಕ್ಷಣ, ಆರೋಗ್ಯ, ನೀರಾವರಿ, ರಸ್ತೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದು ಸಚಿವರು ಹೇಳಿದರು.

ಜಿಲ್ಲೆಯ ಕೊನೆಯ ಭಾಗದ ರೈತರ ಜಮೀನುಗಳಿಗೂ ಸಮರ್ಪಕವಾಗಿ ನೀರು ತಲುಪಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು. ಪ್ರಭಾವ ಬಳಸಿ ಅಥವಾ ಅನಧಿಕೃತವಾಗಿ ನೀರಾವರಿ ಮಾಡಿಕೊಳ್ಳುತ್ತಿರುವುದು ಕಂಡುಬಂದಲ್ಲಿ, ಅಂತಹ ಪ್ರಕರಣಗಳ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಕಠಿಣ ಕ್ರಮಕ್ಕೆ ಮುಂದಾಗಲಾಗುವುದು ಎಂದು ತಿಳಿಸಿದರು.

ರಾಯಚೂರು ಜಿಲ್ಲೆಯಲ್ಲಿ ಯುವಜನರ ಪ್ರಮಾಣ ಹೆಚ್ಚಿನ ಸಂಖ್ಯೆಯಲ್ಲಿರುವುದನ್ನು ಉಲ್ಲೇಖಿಸಿದ ಸಚಿವರು, ಜಿಲ್ಲೆಯ ಯುವಶಕ್ತಿಯನ್ನು ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯೋಗ ಹಾಗೂ ಅಭಿವೃದ್ಧಿ ಚಟುವಟಿಕೆಗಳಲ್ಲಿ ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಎನ್.ಎಸ್. ಬೋಸರಾಜು, ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್, ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಮಹಾನಗರ ಪಾಲಿಕೆ ಆಯುಕ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಶ್ರೀಮಠಕ್ಕೆ ಅಪೋಲೋ ಆಸ್ಪತ್ರೆಗಳ ಉಪಾಧ್ಯಕ್ಷೆ ಉಪಾಸನಾ ಕೊನಿಡಲಾ ಭೇಟಿ

ಬಲಪಡಿಸುವುದು ಕಾಲದ ಅಗತ್ಯವಾಗಿದೆ. ಭಕ್ತರು ಹಾಗೂ ಸುತ್ತಮುತ್ತಲಿನ ಬಡ ಮತ್ತು ಅಗತ್ಯವಿರುವ ಕುಟುಂಬಗಳಿಗೆ ಸಮರ್ಪಕ ವೈದ್ಯಕೀಯ ನೆರವು ದೊರೆಯುವ ವ್ಯವಸ್ಥೆ ರೂಪಿಸುವ ಕುರಿತು ಚರ್ಚೆ ನಡೆಯಿತು.

ಶ್ರೀಮಠದ ಈ ಅಭಿಪ್ರಾಯಕ್ಕೆ ಶ್ರೀಮತಿ ಉಪಾಸನಾ ಕೊನಿಡಲಾ ಸಕಾರಾತ್ಮಕವಾಗಿ ಸ್ಪಂದಿಸಿ, ಆರೋಗ್ಯ ಸೇವೆಗಳ ಅಭಿವೃದ್ಧಿಗೆ ಸಂಬಂಧಿಸಿದ ಮುಂದಿನ ಕ್ರಮಗಳಿಗೆ ತಮ್ಮ ಬೆಂಬಲ ನೀಡುವುದಾಗಿ ತಿಳಿಸಿದರು.

ಶ್ರೀಮಠದ ಧಾರ್ಮಿಕ ಮತ್ತು ಸಮಾಜಮುಖಿ ಸೇವೆಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಮಂತ್ರಾಲಯದಂತಹ ಪವಿತ್ರ ಕ್ಷೇತ್ರದಲ್ಲಿ ಭಕ್ತರ ಆರೋಗ್ಯ ರಕ್ಷಣೆಗೆ ಕೈಗೊಳ್ಳುವ ಪ್ರಯತ್ನಗಳು ಮಹತ್ವದ್ದಾಗಿವೆ ಎಂದು ಅಭಿಪ್ರಾಯಪಟ್ಟರು.

# ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಒಗ್ಗಟ್ಟಿನ ಪ್ರಯತ್ನ ಅಗತ್ಯ: ಎನ್.ಎಸ್. ಬೋಸರಾಜು

ನಂತರವೂ ನಿಜಾಮರ ಆಡಳಿತದಲ್ಲೇ ಮುಂದುವರಿದಿತ್ತು. ಹೈದರಾಬಾದ್ ವಿಮೋಚನಾ ಹೋರಾಟ ಮತ್ತು ಹೋರಾಟಗಾರರ ತ್ಯಾಗದ ಫಲವಾಗಿ 1948ರ ಸೆ.17ರಂದು ಈ ಪ್ರದೇಶವು ನಿಜಾಮರ ಆಡಳಿತದಿಂದ ಮುಕ್ತವಾಗಿ ಭಾರತದ ಒಕ್ಕೂಟಕ್ಕೆ ಸೇರ್ಪಡೆಯಾಯಿತು. ಆ ಐತಿಹಾಸಿಕ ದಿನವನ್ನು ಕಲ್ಯಾಣ ಕರ್ನಾಟಕ ಉತ್ಸವವಾಗಿ ಆಚರಿಸಲಾಗುತ್ತಿದೆ ಎಂದು ಹೇಳಿದರು.

ವಿಮೋಚನಾ ಹೋರಾಟಗಾರರ ತ್ಯಾಗವನ್ನು ಗೌರವಿಸುವುದರ ಜೊತೆಗೆ, ಮುಂದಿನ ಪೀಳಿಗೆಗೆ ಈ ಭಾಗದ ಇತಿಹಾಸ ಪರಿಚಯಿಸುವುದು ಹಾಗೂ ಅಭಿವೃದ್ಧಿಗೆ ಹೊಸ ಸಂಕಲ್ಪ ಕೈಗೊಳ್ಳುವುದು ಉತ್ಸವದ ಆಶಯವಾಗಬೇಕು ಎಂದು ಎನ್.ಎಸ್. ಬೋಸರಾಜು ತಿಳಿಸಿದರು.

ಈ ಸಂದರ್ಭದಲ್ಲಿ ರಾಯಚೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಜಯಣ್ಣ, ಮೊಹಮ್ಮದ್ ಶಾಲಂ, ಅಮರೇಗೌಡ ಹಂಚಿನಾಳ, ನರಸಿಂಹಲು ಮಾಡಗಿರಿ, ಜಿಂದಪ್ಪ, ತಿಮ್ಮಪ್ಪ ನಾಯಕ, ಹರಿಬಾಬು, ಮಲ್ಲೇಶ ಕೊಲಿಮಿ, ಬಸವರಾಜ ಪಟೇಲ್, ವಿಶ್ವನಾಥ ಪಾಟೀಲ್, ಕುರುಬೂರು ಜ್ಞಾನಜೀನಯ, ರಮೇಶ್ ಯಾದವ್, ಜಯವಂತರಾಯ ಪಾತಂಗೆ, ಬಸರಾಜ ಪಾಟೀಲ್, ಬಿ. ರಮೇಶ್, ಯೂಸುಫ್ ಖಾನ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ತಾಲೂಕು ಆಡಳಿತದಿಂದ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ



ಮಾನ್ವಿ: ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲಿ ತಾಲೂಕು ಆಡಳಿತದ ವತಿಯಿಂದ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ದೊರೆತ ನಂತರವೂ ಹೈದರಾಬಾದ್ ನಿಜಾಮರ ಆಡಳಿತದಲ್ಲಿದ್ದ ಕಲ್ಯಾಣ ಕರ್ನಾಟಕ ಭಾಗವು ತಡವಾಗಿ ವಿಮೋಚನೆಗೊಂಡಿತು. ಅಂದಿನ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ನೇತೃತ್ವದಲ್ಲಿ ನಡೆದ ಪೊಲೀಸ್ ಕಾರ್ಯಾಚರಣೆಯ ಮೂಲಕ ಈ ಪ್ರದೇಶ ನಿಜಾಮರ ಆಡಳಿತದಿಂದ ಮುಕ್ತವಾಯಿತು ಎಂದು ತಿಳಿಸಿದರು.

ಸರ್ದಾರ್ ವಲ್ಲಭಭಾಯಿ ಪಟೇಲ್, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಮಹಾತ್ಮ ಗಾಂಧಿ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಲಾಯಿತು.

ಶಾಸಕ ಹಂಪಯ್ಯ ನಾಯಕ್ ಮಾತನಾಡಿ, ಸ್ವಾತಂತ್ರ್ಯದ ನಂತರ ವಿವಿಧ ಸಂಸ್ಥಾನಗಳಾಗಿ ವಿಭಜಿತವಾಗಿದ್ದ ದೇಶವನ್ನು ಒಗ್ಗೂಡಿಸಿ ಅಖಂಡ ಭಾರತ ನಿರ್ಮಾಣ ಮಾಡುವಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಮಹತ್ವದ ಪಾತ್ರ ವಹಿಸಿದ್ದರು ಎಂದು ಹೇಳಿದರು. ಹೈದರಾಬಾದ್ ನಿಜಾಮರ ಆಡಳಿತದ ಅವಧಿಯಲ್ಲಿ ರಜಾಕಾರರಿಂದ ಜನರು ಅನುಭವಿಸಿದ ಸಂಕಷ್ಟಗಳನ್ನು ಉಲ್ಲೇಖಿಸಿದ ಅವರು, ಆ ಕಾಲದ ಕೆಲವು ಘಟನೆಗಳನ್ನು ತಮ್ಮ ಬಾಲ್ಯದ ನೆನಪುಗಳೊಂದಿಗೆ ಸ್ಮರಿಸಿದರು.

ಹಿರಿಯರ ತ್ಯಾಗ ಮತ್ತು ಹೋರಾಟದಿಂದ ದೊರೆತ ಸ್ವಾತಂತ್ರ್ಯವನ್ನು ಉಳಿಸಿಕೊಂಡು ದೇಶದ ಪ್ರಗತಿಗೆ ಎಲ್ಲರೂ ಕೈಜೋಡಿಸಬೇಕು. ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗಾಗಿ ಇನ್ನಷ್ಟು ಶ್ರಮಿಸುವ ಅಗತ್ಯವಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ಪಿಐ ಸೋಮಶೇಖರ್ ಎಸ್. ಕೆಂಚರೆಡ್ಡಿ, ಗ್ರೇಡ್-2 ತಹಶೀಲ್ದಾರ್ ಅಬ್ದುಲ್ ವಾಹಿದ್, ಮಹಾಂತೇಶ ಸ್ವಾಮಿ ರೌಡೂರು, ರಾಜಾ ಸುಭಾಷ್ ಚಂದ್ರ ನಾಯಕ್, ಜಿ. ನಾಗರಾಜ್, ಸೈಯದ್ ಅಕ್ಬರ್ ಪಾಷಾ, ಜಮೀಲ ಅಹ್ಮದ್, ಡಿ. ವೀರೇಶ್, ಸತ್ತಾರ್ ಬಂಗ್ಲೆವಾಲೆ, ಹಂಪಯ್ಯ ನಾಯಕ್, ಕಾಮೇಶ್, ಅಂಬಣ್ಣ ಮದ್ಲಾಪುರ, ಮೌನೇಶ್, ಶಣ್ಮುಖಾಚಾರ್ಯ, ವಿಜಯ್ ರಾವ್ ಕುಪನೇಶಿ, ಶ್ರೀಶೈಲ ಮಾಸ್ಟರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಭಲವಾದಿ ಮಹಾಸಭಾ ನೂತನ ರಾಜ್ಯ ಕಚೇರಿ ಉದ್ಘಾಟನೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ: ಶಿವರಾಜ ಉಮಳಿಹೊಸೂರು




ಮಾನ್ವಿ: ರಾಜ್ಯ ಛಲವಾದಿ ಮಹಾಸಭಾದ ನೂತನ ರಾಜ್ಯ ಕಚೇರಿ ಉದ್ಘಾಟನೆ ಹಾಗೂ 2026-27ನೇ ಸಾಲಿನ ಸರ್ವ ಸದಸ್ಯರ ಸಭೆ ಸೆ.20ರಂದು ಬೆಂಗಳೂರಿನ ದೊಡ್ಡಬಸ್ತಿಯಲ್ಲಿ ನಡೆಯಲಿದ್ದು, ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮಹಾಸಭಾದ ಮಾನ್ವಿ ತಾಲೂಕು ಘಟಕದ ಅಧ್ಯಕ್ಷ ಶಿವರಾಜ ಉಮಳಿಹೊಸೂರು ಮನವಿ ಮಾಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಛಲವಾದಿ ಮಹಾಸಭಾ ಸುಮಾರು 5 ಸಾವಿರ ಅಜೀವ ಸದಸ್ಯರನ್ನು ಹೊಂದಿರುವ ಬೃಹತ್ ಸಂಘಟನೆಯಾಗಿದೆ. ರಾಜ್ಯಾಧ್ಯಕ್ಷೆ ವಾಣಿ ಶಿವರಾಮ ಅವರ ನೇತೃತ್ವದಲ್ಲಿ ನೂತನ ರಾಜ್ಯ ಕಚೇರಿ ಉದ್ಘಾಟನೆ ಹಾಗೂ ಸರ್ವ ಸದಸ್ಯರ ಸಭೆ ನಡೆಯಲಿದೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಮಾನ್ವಿ ತಾಲೂಕಿನ ಛಲವಾದಿ ಸಮುದಾಯದವರನ್ನು ಮತ್ತಷ್ಟು ಸಂಘಟಿಸಿ, ಸಮುದಾಯದ ಶೈಕ್ಷಣಿಕ, ಸಾಮಾಜಿಕ ಹಾಗೂ ಸಂಘಟನಾತ್ಮಕ ಅಭಿವೃದ್ಧಿಗೆ ಅಗತ್ಯ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದರು.

ಮಾನ್ವಿ ಪಟ್ಟಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ, ಡಾ. ಬಿ.ಆರ್. ಅಂಬೇಡ್ಕರ್ ವೃತ್ತ ನಿರ್ಮಾಣ ಹಾಗೂ ಅಂಬೇಡ್ಕರ್ ಪ್ರತಿಮೆ ಸ್ಥಾಪನೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ತಾಲೂಕು ಘಟಕದ ವತಿಯಿಂದ ಅಗತ್ಯ ಕ್ರಮ ಹಾಗೂ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹನುಮಂತ ಜಾನೇಕಲ್, ಮುಕ್ಕಣ್ಣ ಬೈಲ್ ಮಾರ್ಚಡ್, ತಿಪ್ಪಣ್ಣ ಜಾನೇಕಲ್, ಬಸಪ್ಪ ನಂದಿಹಾಳ್, ಮಲ್ಲಿಕಾರ್ಜುನ, ಹನುಮಂತ ನಂದಿಹಾಳ್, ಕಾಶಿನಾಥ ಕುರ್ಡಿ, ಅನ್ನಮಯ್ಯ ಜಾನೇಕಲ್, ತಾಯಣ್ಣ, ಬಸವರಾಜ್, ಪರಶುರಾಮ್, ಬಸವಲಿಂಗ, ಆಂಜನೇಯ್ಯ, ರೇಣುಕಾರಾಜ್, ಬಂಡೆಗುರು ಹಾಗೂ ಗುರು ಬೊಮ್ಮನಾಳ್ ಉಪಸ್ಥಿತರಿದ್ದರು.

## ಕಲ್ಯಾಣ ಕರ್ನಾಟಕದ ಯುವಜನತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧರಾಗಲಿ: ಅಶೋಕ ಪವಾರ್



ಸಿರವಾರ: ಸಾಕ್ಷರತೆ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕವೇ ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿ ಸಾಧ್ಯ. ಸಾಕ್ಷರತೆ ಹೆಚ್ಚಳ, ಬಡತನ ನಿರ್ಮೂಲನೆ, ಸಾಮಾಜಿಕ ಸಮಾನತೆ ಹಾಗೂ ಶೈಕ್ಷಣಿಕ ಸಂಸ್ಥೆಗಳ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ತಹಶೀಲ್ದಾರ್ ಅಶೋಕ ಪವಾರ್ ಹೇಳಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಆವರಣದಲ್ಲಿ ತಾಲೂಕು ಆಡಳಿತದ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ದೇಶಕ್ಕೆ ಆಗಸ್ಟ್ 15 ಸ್ವಾತಂತ್ರ್ಯ ದಿನದ ಸಂಭ್ರಮವಾದರೆ, ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ಸೆಪ್ಟೆಂಬರ್ 17 ವಿಶೇಷ ದಿನವಾಗಿದೆ. ಭಾರತ ಸ್ವಾತಂತ್ರ್ಯ ಪಡೆದ 13 ತಿಂಗಳು 2 ದಿನಗಳ ಬಳಿಕ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ದೃಢ ನಿರ್ಧಾರ ಮತ್ತು ಕ್ರಮದಿಂದ ಈ ಭಾಗವು ನಿಜಾಮರ ಆಡಳಿತದಿಂದ ಮುಕ್ತವಾಯಿತು ಎಂದು ಸ್ಮರಿಸಿದರು.

ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಸರ್ಕಾರ ಸಂವಿಧಾನದ 371(ಜೆ) ಅಡಿಯಲ್ಲಿ ವಿಶೇಷ ಸೌಲಭ್ಯ ಮತ್ತು ಅನುದಾನ ಒದಗಿಸುತ್ತಿದೆ. ವಿದ್ಯಾರ್ಥಿಗಳು ಮತ್ತು ಯುವಕರು ಈ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಸದೃಢರಾಗಬೇಕು. ವಿಶೇಷವಾಗಿ ಯುವಜನತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉತ್ತಮವಾಗಿ ತಯಾರಿ ನಡೆಸಿ ಉನ್ನತ ಹುದ್ದೆಗಳನ್ನು ಅಲಂಕರಿಸುವ ಗುರಿ ಹೊಂದಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಜಿ ಚೌಧ್ರಿ, ಉಪಾಧ್ಯಕ್ಷೆ ಲಕ್ಷ್ಮಿ ಆದೆಪ್ಪ, ಮುಖ್ಯಾಧಿಕಾರಿ ಜಗನ್ನಾಥ ಜೋಶಿ, ತಾಲೂಕು ಪಂಚಾಯಿತಿ ಇಒ ಮಂಜುನಾಥ ಜಾವೂರು, ಸಿಪಿಐ ಎಂ. ಶಶಿಕಾಂತ, ನೀರಾವರಿ ಇಲಾಖೆಯ ಎಇಇ ವಿಜಯಲಕ್ಷ್ಮಿ ಪಾಟೀಲ, ಪಟ್ಟಣ ಪಂಚಾಯಿತಿ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ವಿಶ್ವಕರ್ಮ ಜಯಂತಿ ಅಂಗವಾಗಿ ಸಿರವಾರದಲ್ಲಿ ಭವ್ಯ ಮೆರವಣಿಗೆ



ಸಿರವಾರ: ಪಟ್ಟಣದಲ್ಲಿ ವಿಶ್ವಕರ್ಮ ಜಯಂತಿ ಅಂಗವಾಗಿ ವಿಶ್ವಕರ್ಮ ಸಮಾಜದ ವತಿಯಿಂದ ಗುರುವಾರ ಭಗವಾನ್ ಶ್ರೀ ವಿಶ್ವಕರ್ಮರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಸಲಾಯಿತು.

ಪಟ್ಟಣದ ಪಿಡಬ್ಲ್ಯೂಡಿ ಕ್ಯಾಂಪ್‌ನ ಹನುಮಾನ ದೇವಸ್ಥಾನದಿಂದ ದೇವದುರ್ಗ ರಸ್ತೆಯ ಬಸವ ವೃತ್ತದವರೆಗೆ ಮೆರವಣಿಗೆ ಸಾಗಿತು. ಮಹಿಳೆಯರು ಕಳಸ ಹೊತ್ತು ಭಾಗವಹಿಸಿದ್ದು, ಡೊಳ್ಳು ಕುಣಿತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಮೆರವಣಿಗೆಗೆ ವಿಶೇಷ ಮೆರುಗು ನೀಡಿದವು.

ವಿಶ್ವಕರ್ಮ ಸಂಘದ ತಾಲೂಕು ಘಟಕದ ಅಧ್ಯಕ್ಷ ಪ್ರಭುಸ್ವಾಮಿ ಹೀರಾ, ಸಿದ್ದರಾಮೇಶ್ವರ ಪತ್ತಾರ, ಕಾಳಪ್ಪ ಕಮ್ಮಾರ, ಬಸವರಾಜ, ಮಲ್ಲಿಕಾರ್ಜುನ ಬೀರನೂರು, ವರದರಾಜ, ಶಿವಕುಮಾರ, ಜಗದೀಶ ಬಡಿಗೇ,ರ ಸುರೇಶ ಅರಕೇರಿ, ಶರಣಬಸವ ಬಡಿಗೇರಿ, ಗಂಗಾಧರ ಬಡಿಗೇರಿ, ಮೌನೇಶ ಜಾಡಲದಿನ್ನಿ, ವಿರೇಶ ಗವಿಗಟ್ಟ, ಮೌನೇಶ ಮಾನ್ವಿ, ಕೃಷ್ಣ ಆಚಾರ್ಯ ಸೇರಿದಂತೆ ಸಮಾಜದ ಮುಖಂಡರು, ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಸ್ವಾತಂತ್ರ್ಯ ಹೋರಾಟಗಾರರು ಕೃತಿ ಲೋಕಾರ್ಪಣೆ



ಮಾನ್ವಿ: ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ತಾಲೂಕು ಆಡಳಿತದಿಂದ ಆಯೋಜಿಸಿದ್ದ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ವಿಜಯ ರಾವ್ ಕುಪನೇಶಿ ರಚಿಸಿರುವ ಮಾನ್ವಿಯ ಸ್ವಾತಂತ್ರ್ಯ ಹೋರಾಟಗಾರರು ಕೃತಿಯನ್ನು ಶಾಸಕ ಹಂಪಯ್ಯ ನಾಯಕ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಹಂಪಯ್ಯ ನಾಯಕ, ಮಾನ್ವಿ ತಾಲೂಕಿನ ಅನೇಕ ದೇಶಭಕ್ತರು ಹಾಗೂ ಮಹನೀಯರು ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಹಾಗೂ ನಂತರ ಕಲ್ಯಾಣ ಕರ್ನಾಟಕ ವಿಮೋಚನೆಗಾಗಿ ಹೈದರಾಬಾದ್ ನಿಜಾಮರ ಆಡಳಿತದ ವಿರುದ್ಧ ಹೋರಾಟ ನಡೆಸಿದ್ದಾರೆ. ನಿವೃತ್ತ ಪ್ರಾಚಾರ್ಯರಾದ ಡಾ. ವಿಜಯ ರಾವ್ ಕುಪನೇಶಿ ಅವರು ತಾಲೂಕಿನ ಸ್ವಾತಂತ್ರ್ಯ ಹೋರಾಟಗಾರರ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಿ, ಮುಂದಿನ ಪೀಳಿಗೆಗೆ ಮಾನ್ವಿ ತಾಲೂಕಿನ ಇತಿಹಾಸವನ್ನು ಪರಿಚಯಿಸುವ ಉತ್ತಮ ಕಾರ್ಯ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಂತರ ಡಾ. ವಿಜಯ ರಾವ್ ಕುಪನೇಶಿ ಅವರು ಮಾನ್ವಿಯ ಸ್ವಾತಂತ್ರ್ಯ ಹೋರಾಟಗಾರರು ಕೃತಿಯ ಕುರಿತು ಮಾತನಾಡಿ, ಕೃತಿ ರಚನೆಯ ಉದ್ದೇಶ ಹಾಗೂ ಸ್ವಾತಂತ್ರ್ಯ ಹೋರಾಟದಲ್ಲಿ ಮಾನ್ವಿ ತಾಲೂಕಿನ ಹೋರಾಟಗಾರರ ಪಾತ್ರದ ಬಗ್ಗೆ ವಿವರಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಾಫುರ್ ಸಾಬ್, ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ಪಿಐ ಸೋಮಶೇಖರ್ ಎಸ್. ಕೆಂಚರೆಡ್ಡಿ, ತಹಶೀಲ್ದಾರ್ ಭೀಮರಾಯ ರಾಮಸಮುದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಿರೇನಗನೂರು ಸರ್ಕಾರಿ ಪ್ರೌಢಶಾಲೆಯಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ



ಹಟ್ಟಿ ಚಿನ್ನದ ಗಣಿ: ಸಮೀಪದ ಹಿರೇನಗನೂರು ಸರ್ಕಾರಿ ಪ್ರೌಢಶಾಲೆಯಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಶಾಲೆಯ ಮುಖ್ಯಗುರು ಶ್ರೀಮತಿ ವಿಜಯಲಕ್ಷ್ಮಿ ಹಿರೇಮಠ ಧ್ವಜಾರೋಹಣ ನೆರವೇರಿಸಿದರು. ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಿಕ್ಷಣ ಪ್ರೇಮಿ ಬಸವರಾಜಪ್ಪ ಕುರುಗೋಡು, ಭೂದಾನಿ ವಿರೂಪಾಕ್ಷಪ್ಪ ಮಾಲಿಪಾಟೀಲ್, ಶಿಕ್ಷಣ ಪ್ರೇಮಿ ಮೌನುದ್ದೀನ್ ಬೂದಿನಾಳ, ತಿಮ್ಮನಗೌಡ ಪೊಲೀಸ್ ಪಾಟೀಲ್, ಲಿಂಗಪ್ಪ ಹುಬ್ಬಳ್ಳಿ ಹಾಗೂ ಎಸ್‌ಡಿಎಂಸಿ ಸದಸ್ಯರಾದ ಅಮರಗುಂಡಪ್ಪ ಮತ್ತು ಅಬ್ರಾಹಂ ಸಲಬೂರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಶಿಕ್ಷಕ ರವೀಂದ್ರ ಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿ, ಹೈದರಾಬಾದ್ ಕರ್ನಾಟಕ ವಿಮೋಚನಾ ಚಳವಳಿಯ ಹಿನ್ನೆಲೆ, ಹೋರಾಟಗಾರರ ತ್ಯಾಗ-ಬಲಿದಾನ ಹಾಗೂ ಈ ಭಾಗದ ವಿಮೋಚನೆಗಾಗಿ ನಡೆದ ಹೋರಾಟಗಳ ಕುರಿತು ಮಾಹಿತಿ ನೀಡಿದರು.

ಬಸವರಾಜಪ್ಪ ಕುರುಗೋಡು ಮಾತನಾಡಿ, ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟದಲ್ಲಿ ಅನೇಕ ಹೋರಾಟಗಾರರು ಮಹತ್ವದ ಪಾತ್ರ ವಹಿಸಿದ್ದಾರೆ. ಈ ಭಾಗ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುತ್ತಿರುವುದು ಸಂತಸದ ಸಂಗತಿಯಾಗಿದ್ದು, ನಿರುದ್ಯೋಗಿ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶಗಳು ದೊರೆಯಬೇಕು ಎಂದು ಆಶಿಸಿದರು.

ಲಿಂಗಪ್ಪ ಹುಬ್ಬಳ್ಳಿ ಮಾತನಾಡಿ, ಪ್ರತಿಯೊಬ್ಬರೂ ಶಿಕ್ಷಣ ಪಡೆದು ಉತ್ತಮ ಹುದ್ದೆಗಳನ್ನು ಪಡೆಯಬೇಕು. ವಿದ್ಯಾರ್ಥಿ ಜೀವನದಿಂದಲೇ ಹೋರಾಟದ ಮನೋಭಾವ ಮತ್ತು ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಎಂದರು.

ಮೌನುದ್ದೀನ್ ಬೂದಿನಾಳ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂವಿಧಾನದ 371(ಜೆ) ಅಡಿಯಲ್ಲಿ ದೊರೆತಿರುವ ವಿಶೇಷ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಸಮರ್ಪಕವಾಗಿ ಬಳಸಿಕೊಂಡು ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳಿಗೆ ಸೇರುವಂತೆ ಪರಿಶ್ರಮಿಸಬೇಕು. ಈ ವಿಶೇಷ ಅವಕಾಶದಿಂದ ಈ ಭಾಗದ ಅನೇಕ ಯುವಕರಿಗೆ ಉದ್ಯೋಗದಲ್ಲಿ ಮೀಸಲಾತಿ ದೊರೆಯುತ್ತಿರುವುದು ಸಂತಸದ ಸಂಗತಿ ಎಂದರು.

ವಿರೂಪಾಕ್ಷಪ್ಪ ಮಾಲಿಪಾಟೀಲ್ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಮಹತ್ವದ ಕುರಿತು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯಗುರು ವಿಜಯಲಕ್ಷ್ಮಿ ಹಿರೇಮಠ ಮಾತನಾಡಿ, ಶೈಕ್ಷಣಿಕವಾಗಿ ಹಿಂದುಳಿದಿದ್ದ ಈ ಭಾಗವು ಇಂದು ಶಿಕ್ಷಣ, ಸಮಾಜ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ಪ್ರಗತಿಯತ್ತ ಸಾಗುತ್ತಿದೆ. ವಿದ್ಯಾರ್ಥಿಗಳು ಉತ್ತಮವಾಗಿ ಅಭ್ಯಾಸ ಮಾಡಿ ವಿವಿಧ ಇಲಾಖೆಗಳ ಹುದ್ದೆಗಳಿಗೆ ಆಯ್ಕೆಯಾಗಬೇಕು. ಪ್ರತಿಭೆಗೆ ಸೂಕ್ತ ಅವಕಾಶ ದೊರೆತಾಗ ಮಾತ್ರ ಅದು ಬೆಳಕಿಗೆ ಬರಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ರವೀಂದ್ರ ಸ್ವಾಮಿ, ಗೋಪಾಲ್ ಹಂಚಟೆ, ನಾಗರಾಜ್, ಸುರೇಖಾ, ಚಾಂದ್ ಪಾಷಾ, ಗೌತಮಿ ಹಾಗೂ ಪ್ರಶಿಕ್ಷಣಾರ್ಥಿಗಳಾದ ಯಲ್ಲಮ್ಮ ಮತ್ತು ಬಸಮ್ಮ ಭಾಗವಹಿಸಿದ್ದರು. ಶಿಕ್ಷಕ ನಾಗರಾಜ್ ಸ್ವಾಗತಿಸಿದರು, ಗೋಪಾಲ್ ವಂದಿಸಿದರು. ಮುಸ್ತಾಖ್ ಅಹ್ಮದ್ ಕಾರ್ಯಕ್ರಮ ನಿರೂಪಿಸಿದರು.

## ಅಭಿಷೇಕ್ ನಾಡಗೌಡ ಜನ್ಮದಿನ ಅರ್ಥಪೂರ್ಣ ಆಚರಣೆ



ಸಿಂಧನೂರು: ಜೆಡಿಎಸ್ ಯುವ ಮುಖಂಡ ಅಭಿಷೇಕ್ ನಾಡಗೌಡ ಅವರ 37ನೇ ಜನ್ಮದಿನವನ್ನು ನಗರದ ಒಳಬಳ್ಳಾರಿ ರಸ್ತೆಯ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಾಡಗೌಡ್ರು ಅಭಿಮಾನಿ ಬಳಗ, ತಾಲೂಕು ಜೆಡಿಎಸ್ ಘಟಕ, ಶ್ರೀ ಶಾಂಭವಿ ಪುಣ್ಯಾಶ್ರಮ, ಹರೇಟನೂರು ಸ್ವಾಮಿ ಚಾರಿಟೇಬಲ್ ಟ್ರಸ್ಟ್, ಕರಡಕಲ್ ಹಾಗೂ ಅಭಿಷೇಕ್ ನಾಡಗೌಡ ಸ್ನೇಹ ಬಳಗದ ವತಿಯಿಂದ ನೊಂದ ಜೀವಿಗಳ ನಾಡಿಮಿಡಿತ ಕಾರ್ಯಕ್ರಮದಡಿ ಆಶ್ರಮ ನಿವಾಸಿಗಳಿಗೆ ಮಹಾಪ್ರಸಾದ ಸೇವೆ ಹಾಗೂ ಹಣ್ಣು-ಹಂಪಲು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಶಾಂಭವಿ ಪುಣ್ಯಾಶ್ರಮದ ವೀರೇಶ ಯಡಿಯೂರುಮಠ ಸೇರಿದಂತೆ ವಿವಿಧ ಸಮಾಜಗಳ ಗುರುಗಳು ಅಭಿಷೇಕ್ ನಾಡಗೌಡ ಅವರನ್ನು ಸನ್ಮಾನಿಸಿ ಆಶೀರ್ವದಿಸಿದರು.

ಅಭಿಷೇಕ್ ನಾಡಗೌಡ ಮಾತನಾಡಿ, ಕಾರುಣ್ಯ ಆಶ್ರಮ ತಮ್ಮ ಕುಟುಂಬಕ್ಕೆ ಆತ್ಮೀಯವಾದ ಸ್ಥಳವಾಗಿದ್ದು, ಇಲ್ಲಿನ ಹಿರಿಯರು ಹಾಗೂ ವಿಶೇಷಚೇತನರ ಆಶೀರ್ವಾದ ಪಡೆಯುವುದು ಕುಟುಂಬದ ಸಂಪ್ರದಾಯವಾಗಿದೆ ಎಂದರು. ಆಶ್ರಮಕ್ಕೆ ಸ್ವಂತ ಜಾಗ ಕಲ್ಪಿಸಲು ಪ್ರಯತ್ನ ಮುಂದುವರಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ನಾಡಗೌಡ ಅಭಿಮಾನಿಗಳು, ಜೆಡಿಎಸ್ ಮುಖಂಡರು, ಆಶ್ರಮದ ಪದಾಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಮಲ್ಲೇಶ್ವರಯ್ಯ ನುಲಿ ಅವರಿಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ



ದೇವದುರ್ಗ: ಪಟ್ಟಣದ ಬಸವ ಕಾಲೇಜಿನ ಉಪನ್ಯಾಸಕ ಮಲ್ಲೇಶ್ವರಯ್ಯ ನುಲಿ ಅವರು ರಾಯಚೂರು ಜಿಲ್ಲಾ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ನೀಡಲಾಗುವ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲ ಹನುಮಂತರಾಯ ತಿಳಿಸಿದ್ದಾರೆ.

ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಮಲ್ಲೇಶ್ವರಯ್ಯ ನುಲಿ ಅವರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಸೆ.19ರಂದು ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದ್ದಾರೆ.

ಮಲ್ಲೇಶ್ವರಯ್ಯ ನುಲಿ ಅವರು ಪ್ರಶಸ್ತಿಗೆ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಸಂಸ್ಥೆಯ ಅಧ್ಯಕ್ಷ ವಿರೂಪಾಕ್ಷಪ್ಪ ಗೌಡ, ಗೌರವ ಸಲಹೆಗಾರ ತಿರುಪತಿ ಸೂಗೂರು, ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ.

## ವರ್ಗಾವಣೆಗೊಂಡ ಶಿಕ್ಷಕ ವಿಜಯಕುಮಾರ್ ಅತ್ತನೂರಿಗೆ ಆತ್ಮೀಯ ಬೀಳ್ಕೊಡುಗೆ



ದೇವದುರ್ಗ: ಶಿಕ್ಷಕರ ವೃತ್ತಿ ಪವಿತ್ರವಾದದ್ದು. ವಿದ್ಯಾರ್ಥಿಗಳಲ್ಲಿ ಸಂಸ್ಕಾರ, ಶಿಸ್ತು ಮತ್ತು ಉತ್ತಮ ವ್ಯಕ್ತಿತ್ವ ಬೆಳೆಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಶಿಕ್ಷಕರು ವೃತ್ತಿಯ ಜೊತೆಗೆ ಸಮಾಜ ಸೇವೆಗೂ ಆದ್ಯತೆ ನೀಡಬೇಕು ಎಂದು ದೇವದುರ್ಗ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವಿರುಪನಗೌಡ ಹೇಳಿದರು.

ತಾಲೂಕಿನ ನಾಗಡದಿನ್ನಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 30 ವರ್ಷ ಸೇವೆ ಸಲ್ಲಿಸಿ ವರ್ಗಾವಣೆಗೊಂಡ ಶಿಕ್ಷಕ ವಿಜಯಕುಮಾರ್ ಅತ್ತನೂರಿ ಅವರಿಗೆ ಗುರುವಾರ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಉತ್ತಮ ಸಂಸ್ಕಾರ ಹೊಂದಿದ ವ್ಯಕ್ತಿಯನ್ನು ರೂಪಿಸುವುದು, ವಿದ್ಯಾರ್ಥಿಗಳಲ್ಲಿ ಕೌಶಲ್ಯ ಬೆಳೆಸುವುದು ಹಾಗೂ ಜೀವನದ ವಿವಿಧ ಕ್ಷೇತ್ರಗಳಲ್ಲಿ ಯಶಸ್ಸು ಸಾಧಿಸಲು ಮಾರ್ಗದರ್ಶನ ನೀಡುವುದು ಶಿಕ್ಷಕರ ಪ್ರಮುಖ ಹೊಣೆಗಾರಿಕೆಯಾಗಿದೆ. ಕೇವಲ ಪಾಠ ಬೋಧಿಸಿದ ಮಾತ್ರಕ್ಕೆ ಗುರುವಾಗುವುದಿಲ್ಲ. ಶಿಕ್ಷಕರ ನಡತೆ, ವ್ಯಕ್ತಿತ್ವ ಹಾಗೂ ವಿದ್ಯಾರ್ಥಿಗಳೊಂದಿಗಿನ ಆತ್ಮೀಯ ಒಡನಾಟವೂ ಅಷ್ಟೇ ಮಹತ್ವದ್ದಾಗಿದೆ ಎಂದು ಹೇಳಿದರು.

ಶಿಕ್ಷಕ ರವಿ ಜಾಂಪಾಡೆ ಮಾತನಾಡಿ, ಉತ್ತಮ ಗುರುಗಳನ್ನು ಗೌರವಿಸುವುದು ಸಮಾಜವನ್ನೇ ಗೌರವಿಸಿದಂತೆ. ವ್ಯಕ್ತಿ ಎಷ್ಟೇ ಉನ್ನತ ಸ್ಥಾನಕ್ಕೇರಿದರೂ ಜೀವನದಲ್ಲಿ ಗುರುವಿನ ಮಾರ್ಗದರ್ಶನಕ್ಕೆ ವಿಶೇಷ ಮಹತ್ವವಿದೆ. ವಿದ್ಯೆ ಕಲಿಸಿದ ಗುರುಗಳನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ಗುರು-ಹಿರಿಯರನ್ನು ಗೌರವಿಸುವ ಸಮಾಜವು ಸಂಸ್ಕಾರಯುತ ಹಾಗೂ ಸದೃಢವಾಗಿ ಬೆಳೆಯುತ್ತದೆ ಎಂದರು.

ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ನಿರಂತರವಾಗಿ ಮುಂದುವರಿಸಿಕೊಂಡು ಬರಲಾಗುತ್ತಿದೆ ಎಂದು ಅವರು ತಿಳಿಸಿದರು.

ವರ್ಗಾವಣೆಗೊಂಡ ಶಿಕ್ಷಕ ವಿಜಯಕುಮಾರ್ ಅತ್ತನೂರಿ ಅವರ ಸೇವೆ ಹಾಗೂ ವಿದ್ಯಾರ್ಥಿಗಳೊಂದಿಗಿನ ಒಡನಾಟದ ಕುರಿತು ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷೆ ಸೂಫಿಯಾ ಬೇಗಮ್, ಮಹಮ್ಮದ್ ಸಾಬ್ ಕರಿಗುಡ್ಡ, ಸೋಮಶೇಖರ ನಾಯಕ, ಬೂದಿಬಸವ, ಹನುಮಂತರಾಯ, ವಿಜಯಕುಮಾ,ರ ಚಂದ್ರಕಾಂತ, ಸಿದ್ದಲಿಂಗ, ಶ್ವೇತ, ಸುನಿತಾ, ಭಾರ್ಗವಿ, ಅನುರಾಧ, ಹನುಮಂತಿ, ಮಹಮ್ಮದ್ ರಫಿ, ವಿಜಯಶಂಕರ ಸೇರಿದಂತೆ ಶಿಕ್ಷಕ-ಶಿಕ್ಷಕಿಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಹೆಣ್ಣುಮಕ್ಕಳಿಗೆ ಆತ್ಮರಕ್ಷಣೆಯ ಕೌಶಲ್ಯ ಅಗತ್ಯ: ಗೌರಮ್ಮ ಕುಡತನಿ



ಕುಷ್ಟಗಿ: ಹೆಣ್ಣುಮಕ್ಕಳು ಆತ್ಮವಿಶ್ವಾಸದಿಂದ ಹಾಗೂ ಧೈರ್ಯವಾಗಿ ಸಂಚರಿಸಲು ಆತ್ಮರಕ್ಷಣೆಯ ಕಲೆ ಕಲಿಯುವುದು ಅತ್ಯಂತ ಅಗತ್ಯ ಎಂದು ಇನ್ನರ್ ವ್ಹೀಲ್ ಕ್ಲಬ್ ಕುಷ್ಟಗಿ ಅಧ್ಯಕ್ಷೆ ಗೌರಮ್ಮ ಕುಡತನಿ ಹೇಳಿದರು.

ಇನ್ನರ್ ವ್ಹೀಲ್ ಕ್ಲಬ್ ಕುಷ್ಟಗಿ ವತಿಯಿಂದ ಅನ್ನದಾನೇಶ್ವರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರಿಗಾಗಿ ಕರಾಟೆ ಹಾಗೂ ಆತ್ಮರಕ್ಷಣಾ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಕರಾಟೆ ಬ್ಲ್ಯಾಕ್ ಬೆಲ್ಟ್ ಮಾಸ್ಟರ್ಸ್ ಮೌನೇಶ್ ಕೊಪ್ಪರ್ ಹಾಗೂ ವಿಠಲ್ ಅವರು ವಿದ್ಯಾರ್ಥಿನಿಯರಿಗೆ ದಿನನಿತ್ಯದ ಜೀವನದಲ್ಲಿ ಉಪಯೋಗವಾಗುವ ವಿವಿಧ ಆತ್ಮರಕ್ಷಣಾ ತಂತ್ರಗಳನ್ನು ಪ್ರಾಯೋಗಿಕವಾಗಿ ಪ್ರದರ್ಶಿಸಿ ತರಬೇತಿ ನೀಡಿದರು.

ವಿದ್ಯಾರ್ಥಿನಿಯರಿಗೆ ಆತ್ಮರಕ್ಷಣಾ ತರಬೇತಿ ಪಡೆಯಲು ಅವಕಾಶ ಕಲ್ಪಿಸಿದ ಕಾಲೇಜಿನ ಪ್ರಾಂಶುಪಾಲ ಶ್ರೀಕಾಂತ್ ಪಾಟೀಲ್ ಅವರಿಗೆ ಇನ್ನರ್ ವ್ಹೀಲ್ ಕ್ಲಬ್ ವತಿಯಿಂದ ಕೃತಜ್ಞತೆ ಸಲ್ಲಿಸಲಾಯಿತು.

ವಿದ್ಯಾರ್ಥಿನಿಯರ ಆತ್ಮವಿಶ್ವಾಸ ಹಾಗೂ ಸುರಕ್ಷತೆಯನ್ನು ಮತ್ತಷ್ಟು ಹೆಚ್ಚಿಸುವ ಉದ್ದೇಶದಿಂದ ಮುಂದಿನ ತಿಂಗಳಿನಿಂದ ಬೆಲ್ಟ್‌ವಾರು ಆತ್ಮರಕ್ಷಣಾ ತರಬೇತಿ ತರಗತಿಗಳನ್ನು ಮುಂದುವರಿಸಲು ನಿರ್ಧರಿಸಲಾಯಿತು.

ಕಾರ್ಯಕ್ರಮದಲ್ಲಿ ಇನ್ನರ್ ವ್ಹೀಲ್ ಕ್ಲಬ್ ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ, ಜಿಲ್ಲಾ ಕಾರ್ಯದರ್ಶಿ ಡಾ. ಪಾರ್ವತಿ ಪಳೋಟಿ, ಎಡಿಟರ್ ಶಾರದಾ ಶೆಟ್ಟ,ರ್ ಸದಸ್ಯರಾದ ಸುಮಿತ್ರಾ ಕಂಠಿ, ಗಿರಿಜಾ ನಾಗೋಡ, ಶಿವಲೀಲಾ ಮೇಘನಾಪುರ, ಶಿವಲೀಲಾ ಹಿರೇಮಠ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರೋಗಿಗಳ ಸುರಕ್ಷತೆ, ಗುಣಮಟ್ಟದ ಚಿಕಿತ್ಸೆಗೆ ಆದ್ಯತೆ ನೀಡಿ: ಡಾ. ನಂದೀತಾ ಎಂ.ಎನ್.



ರಾಯಚೂರು, ಸೆ.17: ರೋಗಿಗಳ ಆರೈಕೆಯಲ್ಲಿ ಉಂಟಾಗುವ ದೋಷಗಳನ್ನು ಸಕಾಲದಲ್ಲಿ ಗುರುತಿಸಿ, ಗುಣಮಟ್ಟದ ಚಿಕಿತ್ಸಾ ವಿಧಾನಗಳನ್ನು ಅಳವಡಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದೀತಾ ಎಂ.ಎನ್. ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ದಿನದ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯದ ನಂತರವೂ ಹೈದರಾಬಾದ್ ನಿಜಾಮರ ಆಡಳಿತದಲ್ಲಿದ್ದ ಈ ಭಾಗವು 1948ರ ಸೆಪ್ಟೆಂಬರ್ 17ರಂದು ಭಾರತದೊಂದಿಗೆ ವಿಲೀನಗೊಂಡಿತು. ಕಲ್ಯಾಣ ಕರ್ನಾಟಕ ಭಾಗದಲ್ಲಿ ರಾಯಚೂರು ಜಿಲ್ಲೆಯ ಆರೋಗ್ಯ ಸೇವೆಗಳ ಗುಣಮಟ್ಟದಲ್ಲಿ ಯಾವುದೇ ರೀತಿಯ ರಾಜಿ ಮಾಡಿಕೊಳ್ಳದೆ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ವಿಶ್ವ ರೋಗಿಗಳ ಸುರಕ್ಷತಾ ದಿನದ ಅಂಗವಾಗಿ ಮಾತನಾಡಿದ ಅವರು, ರೋಗಿಗಳ ಆರೈಕೆಯಲ್ಲಿ ಪಾಲಕರು ಹಾಗೂ ಆಸ್ಪತ್ರೆಗಳ ಅರೆ ವೈದ್ಯಕೀಯ ಸಿಬ್ಬಂದಿಗೆ ಔಷಧಿ ಮತ್ತು ವೈದ್ಯಕೀಯ ಪರಿಕರಗಳ ಸಮರ್ಪಕ ಬಳಕೆ ಕುರಿತು ಅಗತ್ಯ ತಾಂತ್ರಿಕ ಕೌಶಲ್ಯ ಹಾಗೂ ಮಾರ್ಗದರ್ಶನವನ್ನು ತಜ್ಞರ ಮೂಲಕ ನಿರಂತರವಾಗಿ ಒದಗಿಸಲು ಆದ್ಯತೆ ನೀಡಲಾಗುವುದು ಎಂದರು.

ವೈದ್ಯರಿಂದ ಹಿಡಿದು ಸ್ವಚ್ಛತಾ ಸಿಬ್ಬಂದಿವರೆಗೆ ಆಸ್ಪತ್ರೆಗಳಿಗೆ ಚಿಕಿತ್ಸೆಗೆ ಬರುವ ಪ್ರತಿಯೊಬ್ಬ ರೋಗಿಯನ್ನು ಗೌರವದಿಂದ ಕಾಣಬೇಕು ಹಾಗೂ ಸೌಜನ್ಯಯುತವಾಗಿ ಸೇವೆ ನೀಡಬೇಕು. ಕ್ಷೇತ್ರ ಮಟ್ಟದಲ್ಲಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಸೊಳ್ಳೆಯಿಂದ ಹರಡುವ ಡೆಂಗ್ಯು, ಚಿಕೂನ್ ಗುನ್ಯಾ, ಮಲೇರಿಯಾ ಸೇರಿದಂತೆ ಕ್ಷಯರೋಗ, ಕುಷ್ಠರೋಗ, ವಾಂತಿ-ಭೇದಿ ಮೊದಲಾದ ಸಾಂಕ್ರಾಮಿಕ ರೋಗಗಳ ನಿಯಂತ್ರಣದ ಜೊತೆಗೆ ರಕ್ತದೊತ್ತಡ, ಮಧುಮೇಹ, ಕ್ಯಾನ್ಸರ್ ಸೇರಿದಂತೆ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕಾರ್ಯವನ್ನು ಸಾರ್ವಜನಿಕರ ಸಹಕಾರದೊಂದಿಗೆ ಪರಿಣಾಮಕಾರಿಯಾಗಿ ಮುಂದುವರಿಸಬೇಕು ಎಂದು ಹೇಳಿದರು.

ಎಚ್‌ಐವಿ ಸೋಂಕಿನ ಕುರಿತು ಸ್ವಯಂ ಅರಿವು ಹಾಗೂ ಪರೀಕ್ಷೆಗೆ ಜನರನ್ನು ಪ್ರೇರೇಪಿಸುವ ಕಾರ್ಯವನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕೈಗೊಳ್ಳಬೇಕು. ಆರೋಗ್ಯ ಜಾಗೃತಿ ಕಾರ್ಯಕ್ರಮಗಳಿಗೆ ಸಾರ್ವಜನಿಕರ ಸಹಭಾಗಿತ್ವ ಹೆಚ್ಚಿಸುವ ಉದ್ದೇಶದಿಂದ ಸಾಮಾಜಿಕ ಜಾಲತಾಣಗಳು, ಪತ್ರಿಕೆಗಳು ಹಾಗೂ ಇತರೆ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಗಣೇಶ್ ಕೆ., ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ. ಶಿವಕುಮಾರ ನಾರಾ, ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಪುಂಡಲಿಕ ಗಂಜಿ, ಕಚೇರಿ ಅಧೀಕ್ಷಕಿ ಸುಧಾರಾಣಿ ಸೇರಿದಂತೆ ವಿವಿಧ ವಿಭಾಗಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಮಹಾನಗರ ಪಾಲಿಕೆಯಿಂದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ



ರಾಯಚೂರು, ಸೆ.17: ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಅಂಗವಾಗಿ ರಾಯಚೂರು ಮಹಾನಗರ ಪಾಲಿಕೆ ವತಿಯಿಂದ ವಲಯ-1 ಮತ್ತು ವಲಯ-2 ಕಚೇರಿಗಳಲ್ಲಿ ಧ್ವಜಾರೋಹಣ, ಪುಷ್ಪ ನಮನ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು. ನಗರದ ಸಿಟಿ ಟಾಕೀಸ್ ವೃತ್ತದಲ್ಲಿಯೂ ವಿಶೇಷ ಕಾರ್ಯಕ್ರಮ ನಡೆಸಿ ಮಹನೀಯರಿಗೆ ಗೌರವ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಪಾಲಿಕೆ ಆಯುಕ್ತರು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗವು ವಿಶಿಷ್ಟ ಇತಿಹಾಸ, ಶ್ರೀಮಂತ ಸಂಸ್ಕೃತಿ, ಪರಂಪರೆ ಹಾಗೂ ಹೋರಾಟಗಳ ನೆಲವಾಗಿದೆ. ಈ ಭಾಗದ ವಿಮೋಚನೆ ಮತ್ತು ಅಭಿವೃದ್ಧಿಗಾಗಿ ಅನೇಕ ಮಹನೀಯರು ಹಾಗೂ ಸಾರ್ವಜನಿಕರು ನೀಡಿದ ಕೊಡುಗೆಗಳನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣ, ಆರೋಗ್ಯ, ಕೃಷಿ, ಕೈಗಾರಿಕೆ, ಉದ್ಯೋಗ ಹಾಗೂ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಇನ್ನಷ್ಟು ಪ್ರಗತಿ ಸಾಧಿಸುವ ಅಗತ್ಯವಿದೆ. ಸರ್ಕಾರದ ವಿವಿಧ ಯೋಜನೆಗಳು ಮತ್ತು ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವ ಮೂಲಕ ಈ ಭಾಗದ ಸಮಗ್ರ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಪಾಲಿಕೆ ಸಿಬ್ಬಂದಿ ಕೇವಲ ದಿನನಿತ್ಯದ ಕರ್ತವ್ಯ ನಿರ್ವಹಣೆಗೆ ಸೀಮಿತವಾಗದೆ, ನಗರದ ನೈಜ ಅಭಿವೃದ್ಧಿಗೆ ಪೂರಕವಾಗುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು. ಜಿಲ್ಲಾ ಕೇಂದ್ರವಾಗಿರುವ ರಾಯಚೂರು ನಗರದ ಸ್ವಚ್ಛತೆ, ಹಸಿರೀಕರಣ ಹಾಗೂ ಸೌಂದರ್ಯೀಕರಣಕ್ಕೆ ನಿರಂತರ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಹಿನ್ನೆಲೆಯಲ್ಲಿ ಸಾರ್ವಜನಿಕರು ಹಾಗೂ ಸಿಬ್ಬಂದಿಗೆ ಶುಭಾಶಯ ಕೋರಿದ ಆಯುಕ್ತರು, ಕಲ್ಯಾಣ ಎಂಬ ಆಶಯವನ್ನು ಅಭಿವೃದ್ಧಿ ಕಾರ್ಯಗಳ ಮೂಲಕ ಸಾಕಾರಗೊಳಿಸಲು ಎಲ್ಲರೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತರು, ಆಡಳಿತಾಧಿಕಾರಿ, ವಲಯ-1 ಮತ್ತು ವಲಯ-2ರ ಅಧಿಕಾರಿಗಳು ಹಾಗೂ ಸಿಬ್ಬಂದಿ, ರಾಯಚೂರು ಎನ್‌ಸಿಸಿ ಘಟಕದ ಸದಸ್ಯರು, ಮಾಜಿ ಸೈನಿಕರು, ಸಮುದಾಯ ಸಂಘಟಕರು ಹಾಗೂ ಆಸ್ತಿ ಮತ್ತು ನೀರಿನ ತೆರಿಗೆ ಸಂಗ್ರಹಣೆಯಲ್ಲಿ ತೊಡಗಿರುವ ಸ್ವ-ಸಹಾಯ ಸಂಘಗಳ ಸದಸ್ಯರು ಭಾಗವಹಿಸಿದ್ದರು.

## ಮಾನ್ವಿ, ಸಿಂಧನೂರು, ಸಿರವಾರ ತಾಲೂಕುಗಳು ತೀವ್ರ ಬರಪೀಡಿತ ಎಂದು ಘೋಷಣೆ

ರಾಯಚೂರು, ಸೆ.17: ಪ್ರಸಕ್ತ ಮುಂಗಾರು ಹಂಗಾಮಿನ ಮಳೆ ಕೊರತೆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರಾಯಚೂರು ಜಿಲ್ಲೆಯ ಮಾನ್ವಿ, ಸಿಂಧನೂರು ಹಾಗೂ ಸಿರವಾರ ತಾಲೂಕುಗಳನ್ನು ತೀವ್ರ ಬರಪೀಡಿತ ಪ್ರದೇಶಗಳೆಂದು ಘೋಷಿಸಿದೆ.

ಕಂದಾಯ ಇಲಾಖೆ ಸೆ.17ರಂದು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ RD 586 TNR 2026 (Part-1)ರ ಅನುಬಂಧದಲ್ಲಿ ರಾಯಚೂರು ಜಿಲ್ಲೆಯ ಈ ಮೂರು ತಾಲೂಕುಗಳನ್ನು 'Severe' ಬರಪೀಡಿತ ವರ್ಗದಲ್ಲಿ ಸೇರಿಸಲಾಗಿದೆ. ವೈಜ್ಞಾನಿಕ ಮೌಲ್ಯಮಾಪನ ಹಾಗೂ ಕ್ಷೇತ್ರಮಟ್ಟದ ಪರಿಶೀಲನೆಯ ಆಧಾರದ ಮೇಲೆ ಈ ಘೋಷಣೆ ಮಾಡಲಾಗಿದೆ.

ಮಾನ್ವಿ, ಸಿಂಧನೂರು ಮತ್ತು ಸಿರವಾರ ತಾಲೂಕುಗಳಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳ ಮೇಲೆ ಪರಿಣಾಮ ಉಂಟಾಗಿರುವ ಹಿನ್ನೆಲೆಯಲ್ಲಿ ಬರ ಪರಿಸ್ಥಿತಿಯನ್ನು ಅಧಿಕೃತವಾಗಿ ಗುರುತಿಸಲಾಗಿದೆ. ಬರ ಘೋಷಣೆಯ ನಂತರ ಸಂಬಂಧಪಟ್ಟ ಜಿಲ್ಲಾಡಳಿತಕ್ಕೆ ರಾಜ್ಯ ವಿಪತ್ತು ಪರಿಹಾರ ನಿಧಿ ನಿಯಮಾವಳಿಗಳ ಪ್ರಕಾರ ಅಗತ್ಯ ಪರಿಹಾರ ಹಾಗೂ ತುರ್ತು ಕ್ರಮಗಳನ್ನು ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಬೆಳೆ ಹಾನಿಯ ನಿಖರ ಪ್ರಮಾಣವನ್ನು ಗುರುತಿಸಲು ಕೃಷಿ, ತೋಟಗಾರಿಕೆ ಹಾಗೂ ಜಿಲ್ಲಾಡಳಿತದ ಅಧಿಕಾರಿಗಳು ಜಂಟಿಯಾಗಿ ಸಮೀಕ್ಷೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕಾಗಿದೆ. ಈ ವರದಿಗಳ ಆಧಾರದ ಮೇಲೆ ಅರ್ಹ ರೈತರಿಗೆ ನಿಯಮಾನುಸಾರ ಪರಿಹಾರ ಒದಗಿಸುವ ಪ್ರಕ್ರಿಯೆ ಮುಂದುವರಿಯಲಿದೆ.

ರಾಯಚೂರು ಜಿಲ್ಲೆಯ ಕೃಷಿ ಪ್ರಧಾನ ತಾಲೂಕುಗಳಾದ ಮಾನ್ವಿ, ಸಿಂಧನೂರು ಹಾಗೂ ಸಿರವಾರ ತೀವ್ರ ಬರಪೀಡಿತ ಪಟ್ಟಿಗೆ ಸೇರ್ಪಡೆಯಾಗಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಬೆಳೆ ಹಾನಿ ಪರಿಹಾರ ಹಾಗೂ ರೈತರ ಅಗತ್ಯಗಳಿಗೆ ಆದ್ಯತೆ ನೀಡುವಂತೆ ಜಿಲ್ಲಾಡಳಿತದಿಂದ ಕ್ರಮ ಕೈಗೊಳ್ಳುವ ನಿರೀಕ್ಷೆ ಮೂಡಿದೆ. ಸರ್ಕಾರದ ಬರ ಘೋಷಣೆಯಿಂದ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ಕ್ರಮಗಳು ಶೀಘ್ರ ತಲುಪಬೇಕೆಂಬ ಆಗ್ರಹವೂ ವ್ಯಕ್ತವಾಗುತ್ತಿದೆ.

## ಲೋಕ ಜನಶಕ್ತಿ ಪಕ್ಷದಿಂದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ



ರಾಯಚೂರು: ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಅಂಗವಾಗಿ ಲೋಕ ಜನಶಕ್ತಿ ಪಕ್ಷದ ವತಿಯಿಂದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸುವ ಮೂಲಕ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಕಿ.ಸೇ. ಜಿ. ವೆಂಕಟ್ ರೆಡ್ಡಿ, ಜಿಲ್ಲಾಧ್ಯಕ್ಷ ಬಂಗಿ ಮುನಿರೆಡ್ಡಿ, ಅಲ್ಲಪಾಡ್ ಗೋಪಾಲ್ ರೆಡ್ಡಿ, ಗೌರವಾಧ್ಯಕ್ಷೆ ಎ. ಆಶಾ ರೆಡ್ಡಿ, ಕಾನೂನು ಘಟಕದ ಅಧ್ಯಕ್ಷ ಶೇಖರ್ ಗೌಡ, ಮಹಿಳಾ ಮೋರ್ಚಾ ಅಧ್ಯಕ್ಷೆ ಶಕುಂತಲಾ, ಪ್ರಧಾನ ಕಾರ್ಯದರ್ಶಿ ಜಿತೇಂದ್ರ ಕುಮಾರ್, ಹಿಂದುಳಿದ ವರ್ಗಗಳ ಅಧ್ಯಕ್ಷ ನರಸಪ್ಪ, ತಾಲೂಕು ಅಧ್ಯಕ್ಷ ಹಂಪಯ್ಯ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ರಾಷ್ಟ್ರ ಏಕೀಕರಣದ ಕೊಡುಗೆಯನ್ನು ಸ್ಮರಿಸಿ, ಕಲ್ಯಾಣ ಕರ್ನಾಟಕದ ವಿಮೋಚನಾ ಹೋರಾಟದ ಮಹತ್ವವನ್ನು ಈ ಸಂದರ್ಭದಲ್ಲಿ ನೆನಪಿಸಿಕೊಳ್ಳಲಾಯಿತು.

## ಮುನ್ನೂರು ಕಾಪು ಶಿಕ್ಷಣ ಸಂಸ್ಥೆಯಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವ ಆಚರಣೆ



ರಾಯಚೂರು: ನಗರದ ಮುನ್ನೂರುಕಾಪು ಶಿಕ್ಷಣ ಸಂಸ್ಥೆಯಲ್ಲಿ ಸೆ.17ರಂದು 79ನೇ ಕಲ್ಯಾಣ ಕರ್ನಾಟಕ ಉತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಪೂಜೆ ಸಲ್ಲಿಸಿ ಗೌರವ ನಮನ ಅರ್ಪಿಸಲಾಯಿತು. ಬಳಿಕ ಸಂಸ್ಥೆಯ ಸಹ ಕಾರ್ಯದರ್ಶಿ ಬಾಯ್ಕಾಡ ಶೇಖರ ರೆಡ್ಡಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಆಡಳಿತಾಧಿಕಾರಿ ಕೆ.ಎಂ. ಸುಜಾತ, ಮುಖ್ಯೋಪಾಧ್ಯಾಯಿ ಉಮಾದೇವಿ, ಸಂಸ್ಥೆಯ ಸದಸ್ಯರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಂತರ ಸಂಸ್ಥೆಯ ಆಡಳಿತಾಧಿಕಾರಿಗಳು ಮತ್ತು ಸದಸ್ಯರು ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತಕ್ಕೆ ತೆರಳಿ, ಅವರ ಪುತ್ಥಳಿಗೆ ಪುಷ್ಪಹಾರ ಅರ್ಪಿಸಿ ಗೌರವ ಸಲ್ಲಿಸಿದರು.

ಕಲ್ಯಾಣ ಕರ್ನಾಟಕದ ವಿಮೋಚನಾ ಹೋರಾಟ, ಐತಿಹಾಸಿಕ ಹಿನ್ನೆಲೆ ಹಾಗೂ ಈ ಭಾಗದ ಅಭಿವೃದ್ಧಿಯ ಮಹತ್ವವನ್ನು ಸ್ಮರಿಸುವ ಮೂಲಕ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

## ಲಿಂಗಸುಗೂರಿನಲ್ಲಿ ಸೆ. 19ರಂದು ಜಿಲ್ಲಾ ಮಟ್ಟದ ಪ್ರಜಾಸೇವೆ ಆಂದೋಲನ ಕಾರ್ಯಕ್ರಮ

ರಾಯಚೂರು ಸೆ. 17 (ಕರ್ನಾಟಕ ವಾರ್ತೆ): ಜಿಲ್ಲೆಯ ಲಿಂಗಸುಗೂರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಸೆಪ್ಟಂಬರ್ 19ರಂದು ಜಿಲ್ಲಾ ಮಟ್ಟದ ಪ್ರಜಾಸೇವೆ ಆಂದೋಲನ-2026ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಕೋರಿದ್ದಾರೆ.

ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಜಿಲ್ಲೆಯ ಲೋಕಸಭಾ ಸದಸ್ಯರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿ ತಮ್ಮ ಅಹವಾಲುಗಳನ್ನು ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸವಲತ್ತು ಪಡೆಯಲು ಅರ್ಜಿ ಸಲ್ಲಿಸಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏಮ್ಸ್ ಮಂಜೂರಿಗಾಗಿ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ದೆಹಲಿಗೆ ನಿಯೋಗ: ಸಚಿವ ಅಜಯ್ ಧರ್ಮಸಿಂಗ್



ರಾಯಚೂರು: ಮಹತ್ವಾಕಾಂಕ್ಷಿ ಜಿಲ್ಲೆಯಾದ ರಾಯಚೂರಿಗೆ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ (AIIMS) ಮಂಜೂರು ಮಾಡಬೇಕೆಂಬ ಬೇಡಿಕೆಗೆ ರಾಜ್ಯ ಸರ್ಕಾರ ಬದ್ಧವಾಗಿದ್ದು, ಈ ಕುರಿತು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಶೀಘ್ರವೇ ದೆಹಲಿಗೆ ನಿಯೋಗ ತೆರಳಿ ಕೇಂದ್ರ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಅಜಯ್ ಧರ್ಮಸಿಂಗ್ ಭರವಸೆ ನೀಡಿದರು.

ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹವು 1589ನೇ ದಿನಕ್ಕೆ ಕಾಲಿಟ್ಟಿರುವ ಹಿನ್ನೆಲೆಯಲ್ಲಿ, ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯ ಧ್ವಜಾರೋಹಣ ಕಾರ್ಯಕ್ರಮದ ಬಳಿಕ ಸಚಿವ ಅಜಯ್ ಧರ್ಮಸಿಂಗ್ ಹಾಗೂ ಮಾಜಿ ಸಚಿವ ಎನ್.ಎಸ್. ಬೋಸರಾಜು ಅವರು ಹೋರಾಟದ ವೇದಿಕೆಗೆ ಭೇಟಿ ನೀಡಿದರು.

ಈ ವೇಳೆ ಸಮಿತಿಯ ಪ್ರಧಾನ ಸಂಚಾಲಕ ಡಾ. ಬಸವರಾಜ ಕಳಸ ಮನವಿ ಪತ್ರ ಸಲ್ಲಿಸಿ, ಪ್ರಾದೇಶಿಕ ಅಸಮತೋಲನ ನಿವಾರಣೆ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಗುಣಮಟ್ಟದ ಉನ್ನತ ಆರೋಗ್ಯ ಸೇವೆ ಕಲ್ಪಿಸುವ ದೃಷ್ಟಿಯಿಂದ ರಾಯಚೂರಿಗೆ ಏಮ್ಸ್ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು. ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗಾಗಿ ರಾಜ್ಯ ಸರ್ಕಾರದಿಂದ ಕೇಂದ್ರಕ್ಕೆ ಹಿಂದೆ ಹಲವು ಮನವಿಗಳು ಹಾಗೂ ಪ್ರಸ್ತಾವನೆಗಳು ಸಲ್ಲಿಕೆಯಾಗಿರುವುದಾಗಿ ಅವರು ಹೇಳಿದರು. ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗೆ ಸಂಬಂಧಿಸಿದ ಬೇಡಿಕೆ ಸಂಸತ್ತಿನಲ್ಲಿಯೂ ಹಲವು ಬಾರಿ ಪ್ರಸ್ತಾಪವಾಗಿದ್ದು, ರಾಜ್ಯ ಸರ್ಕಾರ ರಾಯಚೂರನ್ನು ಸೂಕ್ತ ಸ್ಥಳವೆಂದು ಪರಿಗಣಿಸಿರುವ ಕುರಿತು ಅಧಿಕೃತ ದಾಖಲೆಗಳಲ್ಲಿ ಉಲ್ಲೇಖವಿದೆ.

ಹೋರಾಟದ ಅವಧಿ ಹಾಗೂ ಬೇಡಿಕೆಯ ಗಂಭೀರತೆಯನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು, ಅವರ ನೇತೃತ್ವದಲ್ಲಿ ಪ್ರಧಾನಮಂತ್ರಿಯನ್ನು ಭೇಟಿ ಮಾಡುವ ಮೂಲಕ ರಾಯಚೂರಿಗೆ ಏಮ್ಸ್ ಮಂಜೂರಿಗೆ ಒತ್ತಾಯಿಸಬೇಕು ಎಂದು ಡಾ. ಕಳಸ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಅಜಯ್ ಧರ್ಮಸಿಂಗ್, ಕಲ್ಯಾಣ ಕರ್ನಾಟಕ ಭಾಗದ ಆರೋಗ್ಯ ಸೇವೆಗಳಿಗೆ ಬಲ ತುಂಬುವ ನಿಟ್ಟಿನಲ್ಲಿ ರಾಯಚೂರಿಗೆ ಏಮ್ಸ್ ಅಗತ್ಯವಿದೆ ಎಂದು ಹೇಳಿದರು. ರಾಜ್ಯ ಸರ್ಕಾರ ಈಗಾಗಲೇ ಈ ಕುರಿತು ಕೇಂದ್ರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಿದ್ದು, ಮುಂದಿನ ಹಂತದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ನಿಯೋಗ ತೆರಳಿ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದರು. ಪ್ರಸ್ತುತ ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗಿದ್ದಾರೆ.

ರಾಜ್ಯ ಸರ್ಕಾರದ ಮನವಿಗಳಿಗೆ ಕೇಂದ್ರದಿಂದ ನಿರೀಕ್ಷಿತ ಸ್ಪಂದನೆ ಸಿಗುತ್ತಿಲ್ಲ ಎಂದು ಸಚಿವರು ಆರೋಪಿಸಿ, ರಾಯಚೂರು ಜಿಲ್ಲೆಯ ಅಭಿವೃದ್ಧಿ ಮತ್ತು ಜನರ ಆರೋಗ್ಯದ ಹಿತದೃಷ್ಟಿಯಿಂದ ಏಮ್ಸ್ ಮಂಜೂರಾತಿಗಾಗಿ ಒತ್ತಡ ಮುಂದುವರಿಸಲಾಗುವುದು ಎಂದರು. ಇತ್ತೀಚಿನ ವರ್ಷಗಳಲ್ಲಿಯೂ ರಾಯಚೂರಿಗೆ ಏಮ್ ್ಸ ಸ್ಥಾಪಿಸುವ ಬೇಡಿಕೆ ವಿವಿಧ ಜನಪ್ರತಿನಿಧಿಗಳು ಹಾಗೂ ಸಂಘಟನೆಗಳಿಂದ ನಿರಂತರವಾಗಿ ಮುಂದಿಡಲಾಗಿದೆ.

ಈ ಸಂದರ್ಭದಲ್ಲಿ ಮಾಜಿ ಸಚಿವ ಎನ್.ಎಸ್. ಬೋಸರಾಜು, ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಸಿಇಒ, ಕೆ. ಶಾಂತಪ್ಪ, ಹೋರಾಟಗಾರರಾದ ಅಶೋಕ್ ಕುಮಾರ್ ಜೈನ್, ಎಸ್. ಹನುಮಂತಪ್ಪ, ಎಸ್. ಮಾರಪ್ಪ ವಕೀಲರು, ಅಮರೇಗೌಡ ಪಾಟೀಲ್, ಆಂಜನೇಯ ಕುರುಬದೊಡ್ಡಿ, ಹೇಮರಾಜ್ ಅಸ್ಕಿಹಾಳ್, ಜೈಭೀಮ್ ವಲ್ಲಭ್, ಗುರುರಾಜ್ ಕುಲಕರ್ಣಿ, ಕಾಮರಾಜ್ ಪಾಟೀಲ್, ಎಂ.ಆರ್. ಬೇರಿ, ಪ್ರಸನ್ನ ಆಲಂಪಲ್ಲಿ, ರಾಮಣ್ಣ ಮೇದಾರ್, ಮಹೇಂದ್ರ ಸಿಂಗ್, ಭಾರದ್ವಾಜ್, ನಾಸಿರ್ ಹೊಸೂರು, ವೆಂಕಯ್ಯ ಶೆಟ್ಟಿ ಹೊಸಪೇಟೆ, ಸಮೀರ್, ಬಸವರಾಜ್ ಮಿಮಿಕ್ರಿ, ಹುಲಿಗೆಪ್ಪ, ಹಂಪಯ್ಯ ಸ್ವಾಮಿ, ಬಾಲಾಜಿ ರಾವ್, ಕೆ. ಬಸವರಾಜ್, ಕೆ. ಹನುಮಂತು, ಪರಶುರಾಮ್, ವೀರಭದ್ರಪ್ಪ ಅಂಬರಪೇಟೆ, ಅಜೀಜ್, ವೆಂಕಟರೆಡ್ಡಿ ದಿನ್ನಿ, ಡಾ. ಸಾಧಿಕ್ ಖಾನ್ ಎರಗೇರಾ, ವಿನಯ್ ಕುಮಾರ್ ಚಿತ್ರಗಾರ, ವೀರಭದ್ರಯ್ಯ ಸ್ವಾಮಿ, ಶಾಮ್, ಶ್ರೀನಿವಾಸ್ ಜೋಶಿ, ಬಸವತೇಜ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗ್ರಾಮ ಪಂಚಾಯಿತಿಯಲ್ಲಿ ಕಲ್ಯಾಣ ಕರ್ನಾಟಕ ದಿನಾಚರಣೆ



ಜಾಲಹಳ್ಳಿ, ಸೆ.17: ಸಮೀಪದ ಹೊಸೂರು ಸಿದ್ದಾಪೂರ ಗ್ರಾಮ ಪಂಚಾಯಿತಿ ವತಿಯಿಂದ ಗುರುವಾರ ಕಲ್ಯಾಣ ಕರ್ನಾಟಕ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಂಗಮ್ಮ ಕಡೆಮನಿ ಅವರು ಧ್ವಜಾರೋಹಣ ನೆರವೇರಿಸಿದರು. ಬಳಿಕ ಕಲ್ಯಾಣ ಕರ್ನಾಟಕ ಭಾಗದ ಐತಿಹಾಸಿಕ ಹಿನ್ನೆಲೆ ಹಾಗೂ ಹೈದರಾಬಾದ್ ನಿಜಾಮರ ಆಡಳಿತದಿಂದ ಈ ಭಾಗ ವಿಮೋಚನೆಗೊಂಡ ದಿನದ ಮಹತ್ವವನ್ನು ಸ್ಮರಿಸಲಾಯಿತು.

1948ರ ಸೆಪ್ಟೆಂಬರ್ 17ರಂದು ಹೈದರಾಬಾದ್ ಸಂಸ್ಥಾನ ಭಾರತೀಯ ಒಕ್ಕೂಟಕ್ಕೆ ಸೇರ್ಪಡೆಯಾದ ಐತಿಹಾಸಿಕ ಘಟನೆಯ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟದಲ್ಲಿ ಭಾಗವಹಿಸಿದ ಹೋರಾಟಗಾರರ ತ್ಯಾಗ ಹಾಗೂ ಈ ಭಾಗದ ಅಭಿವೃದ್ಧಿಗಾಗಿ ಶ್ರಮಿಸಿದ ಮಹನೀಯರ ಸೇವೆಯನ್ನು ಕಾರ್ಯಕ್ರಮದಲ್ಲಿ ನೆನಪಿಸಲಾಯಿತು.

ಹಿರಿಯ ಮುಖಂಡ ಚಂದಪ್ಪ ಬುದ್ದಿನ್ನಿ ಮಾತನಾಡಿ, ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ನೇತೃತ್ವದಲ್ಲಿ ನಡೆದ ಆಪರೇಷನ್ ಪೋಲೋ ಮೂಲಕ ಹೈದರಾಬಾದ್ ಸಂಸ್ಥಾನವು ಭಾರತೀಯ ಒಕ್ಕೂಟಕ್ಕೆ ಸೇರ್ಪಡೆಯಾದ ಐತಿಹಾಸಿಕ ಘಟನೆಯನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಂಗಮ್ಮ ಕಡೆಮನಿ, ಹಿರಿಯ ಮುಖಂಡರಾದ ಚಂದಪ್ಪ ಬುದ್ದಿನ್ನಿ, ತಿಮ್ಮಣ್ಣ ನಾಯಕ, ಬುಂಕಲದೊಡ್ಡಿ ಮುಖ್ಯ ಶಿಕ್ಷಕ ಮಲ್ಲೇಶ್ ನಾಯ್ಕೋಡಿ, ರಂಗಪ್ಪ ಜೋಳದಡಗಿ, ಮಹೇಂದ್ರ ಕುಮಾರ್, ಗೋಪಾಲ್ ನಾಯಕ, ವೆಂಕಟೇಶ್ ಕಸನದೊಡ್ಡಿ, ಮೌನೇಶ್ ಬೆಂಗಂಡಿ, ಭೀಮಣ್ಣ ನಾಯಕ, ವೆಂಕಟೇಶ್ ಪಾಣಿ, ಗುಂಡಪ್ಪ ಕಾವಲಿ, ಸಹಶಿಕ್ಷಕಿ ಪವಿತ್ರ, ಗ್ರಾಮ ಪಂಚಾಯಿತಿ ಸಿಬ್ಬಂದಿ ಶಿವರಾಜ್, ಡಿಇಒ ಜಯಲಕ್ಷ್ಮಿ, ಜಿಕೆಎಂ ಗ್ರಂಥಪಾಲಕ ಶಿವರಾಜ್ ಸೇರಿದಂತೆ ಶಾಲಾ ಮಕ್ಕಳು, ಹಳೆಯ ವಿದ್ಯಾರ್ಥಿಗಳು, ಗ್ರಾಮಸ್ಥರು ಹಾಗೂ ಯುವಕರು ಉಪಸ್ಥಿತರಿದ್ದರು.

## ಸೆ. 19ರಂದು ಗಿಲ್ಲೇಸೂಗೂರಿನಲ್ಲಿ ಪ್ರಜಾಸೇವೆ ಆಂದೋಲನ ಕಾರ್ಯಕ್ರಮ

ರಾಯಚೂರು ಸೆ. 17 (ಕರ್ನಾಟಕ ವಾರ್ತೆ): ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರ ಅಧ್ಯಕ್ಷತೆಯಲ್ಲಿ ಗಿಲ್ಲೇಸೂಗೂರು ಸರ್ಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಪ್ರಜಾಸೇವೆ ಆಂದೋಲನ-2026ರ ಕಾರ್ಯಕ್ರಮವನ್ನು ಸೆಪ್ಟಂಬರ್ 19ರ ಬೆಳಿಗ್ಗೆ 11ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ರಾಯಚೂರು ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿವಿಧ ಸೌಲಭ್ಯಗಳನ್ನು ಪಡೆಯುವಂತೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆ.ಬಿ.ಎಸ್. ಬ್ಯಾಂಕ್‌ನಿಂದ ₹3 ಲಕ್ಷ ವಿಮೆ ಮೊತ್ತ ವಿತರಣೆ



ರಾಯಚೂರು, ಸೆ.17: ಕೆ.ಬಿ.ಎಸ್. ಬ್ಯಾಂಕ್ ವತಿಯಿಂದ ಪಿಎಂಜೆಬಿವೈ ಹಾಗೂ ಅವಿವಾ ವಿಮೆ ಯೋಜನೆಯಡಿ ಬ್ಯಾಂಕ್ ಗ್ರಾಹಕರ ಕುಟುಂಬಕ್ಕೆ ₹3 ಲಕ್ಷ ವಿಮೆ ಮೊತ್ತದ ಚೆಕ್ ವಿತರಿಸಲಾಯಿತು.

ಬ್ಯಾಂಕ್‌ನ ಗ್ರಾಹಕರಾಗಿದ್ದ ಈಶ್ವರ ಅವರು ಕೆ.ಬಿ.ಎಸ್. ಬ್ಯಾಂಕ್‌ನಲ್ಲಿ ₹1 ಲಕ್ಷ ಸಾಲ ಪಡೆದಿದ್ದು, ಪಿಎಂಜೆಬಿವೈ ಹಾಗೂ ಅವಿವಾ ವಿಮೆ ಯೋಜನೆಗೆ ಒಳಪಟ್ಟಿದ್ದರು. ಅವರ ನಿಧನದ ಬಳಿಕ ವಿಮೆ ಯೋಜನೆಯಡಿ ಮಂಜೂರಾದ ₹3 ಲಕ್ಷ ಮೊತ್ತದ ಚೆಕ್ ಅನ್ನು ಅವರ ಪತ್ನಿ ಶ್ರೀಮತಿ ಪದ್ಮ ಅವರಿಗೆ ಹಸ್ತಾಂತರಿಸಲಾಯಿತು.

ಚೆಕ್ ವಿತರಿಸಿ ಮಾತನಾಡಿದ ಬ್ಯಾಂಕ್ ವ್ಯವಸ್ಥಾಪಕ ರೆಡ್ಡಿ ಪ್ರತಾಪಗೌಡ, ವಿಮೆ ಮೊತ್ತವನ್ನು ಕುಟುಂಬದ ಅಗತ್ಯ ಹಾಗೂ ಉತ್ತಮ ಉದ್ದೇಶಗಳಿಗೆ ಸದ್ಬಳಕೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು.

ವಿಮೆ ಮೊತ್ತದ ಚೆಕ್ ಸ್ವೀಕರಿಸಿದ ಪದ್ಮ ಅವರು ಬ್ಯಾಂಕ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬ್ಯಾಂಕ್ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

## ಮಾನವಿ ಘಟಕದಿಂದ ಹೊಸದಾಗಿ ಬಸ್‌ಗಳ ಕಾರ್ಯಾಚರಣೆ

ರಾಯಚೂರು ಸೆ. 17 (ಕರ್ನಾಟಕ ವಾರ್ತೆ): ಶಾಲಾ ವಿದ್ಯಾರ್ಥಿಗಳಿಗೆ ಗಿಲ್ಲೇಸೂಗುರು ದಿಂದ ಬಿಚ್ಚಾಲಿಗೆ ಸಮಯಕ್ಕೆ ಸರಿಯಾಗಿ ಬಸ್ ಇರುವುದಿಲ್ಲವೆಂದು ಸಾರ್ವಜನಿಕರಿಂದ ದೂರು ಸಲ್ಲಿಸಲಾಗಿದ್ದು, ಸೆಪ್ಟಂಬರ್ 16ರಂದು ಸರ್ವೆ ಮಾಡಿ, ಗಿಲ್ಲೇಸೂಗುರು-ಬಿಚ್ಚಾಲಿ ಮಾರ್ಗದಲ್ಲಿ ಪ್ರಸ್ತುತ ವಿದ್ಯಾರ್ಥಿಗಳಿಗೆ/ಸಾರ್ವಜನಿಕ ಪ್ರಯಾಣಿಕರಿಗೆ ಅನುಕೂಲವಾಗುವಂತೆ, ಮಾನವಿ-ಬಿಚ್ಚಾಲಿ-ಗಿಲ್ಲೇಸೂಗುರು ಹಾಗೂ ಮಾನವಿ-ಬಿಚ್ಚಾಲಿ-ಗಿಲ್ಲೇಸೂಗುರು-ಮಂತ್ರಾಲಯ ಮಾರ್ಗದಲ್ಲಿ ಮಾನವಿ ಘಟಕದಿಂದ ಹೊಸದಾಗಿ ಬಸ್ ಕಾರ್ಯಾಚರಣೆ ಮಾಡಲಿವೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಮಾನವಿಯಿಂದ ಗಿಲ್ಲೇಸೂಗುರು ವರೆಗೆ ಸಮಯ 08:45, 09:30, 10:45, 12:35, 14:35, 19:05ರವರೆಗೆ, ಮಾನವಿಯಿಂದ ಮಂತ್ರಾಲಯ ವರೆಗೆ 07:00, 11:00, 15:15, ಗಿಲ್ಲೇಸೂಗುರಿನಿಂದ ಮಾನವಿ ವರೆಗೆ ಸಮಯ 10:40, 14:30, 06:00, 12:40, 16:45, 11:10 ಹಾಗೂ ಮಂತ್ರಾಲಯದಿದ ಮಾನವಿ ವರೆಗೆ ಸಮಯ 09:00, 13:15, 17:15ಕ್ಕೆ ಬಸ್‌ಗಳು ಕಾರ್ಯಾಚರಣೆ ಮಾಡಲಿವೆ.

ಈ ಮಾರ್ಗವನ್ನು ಸರ್ವೆ ಮಾಡಿ, ಸದರಿ ಗ್ರಾಮದ ಸರ್ಕಾರಿ ಶಾಲೆಗೆ ಭೇಟಿ ಮಾಡಿ ವಿದ್ಯಾರ್ಥಿ ಹಾಗೂ ಶಿಕ್ಷಕರ ಜೊತೆಗೆ ಬಸ್ ಸೌಲಭ್ಯ ಕುರಿತು ಚರ್ಚಿಸಲಾಗಿರುತ್ತದೆ. ಸದರಿ ಅನುಸೂಚಿಗಳ ಸುತ್ತುವಳಿಗಳ ಸದುಪಯೋಗ ಪಡೆದುಕೊಂಡು ಸಂಸ್ಥೆಯೊದಿಗೆ ಸಹಕರಿಸಲು ವಿದ್ಯಾರ್ಥಿಗಳಿಗೆ ತಿಳಿಸಲಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K